ಸಂಪುಟ : 10 ಸಂಚಿಕೆ: 130 ಪುಟ : 4+2 ಬೆಲೆ: 3.00 ಬುಧವಾರ ಜೂನ್ 25 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 130 Pages : 4+2 Price : 3.00 Wednesday June 25 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಅಪೂರ್ಣ ಕಾಮಗಾರಿಗಳ ಕುರಿತು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅಧ್ಯಕ್ಷತೆಯಲ್ಲಿ ಪ್ರಗತಿ ಪರಿಶೀಲನಾ ಸಭೆ

# ಬಾಕಿ ಇರುವ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಿ



**■ ವಿಜಯಸಾಕ್ಷಿ ಸುದ್ದಿ, ಗದಗ**

ಅಪೂರ್ಣ ಕಾಮಗಾರಿಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸುವ ಮೂಲಕ ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗೆ ಅಧಿಕಾರಿ ವರ್ಗ ಸದಾ ಸನ್ನದ್ಧ ಎಂಬುದನ್ನು ಸಾಬೀತುಪಡಿಸಬೇಕು ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ, ನೆನೆಗುದಿಗೆ ಬಿದ್ದಿರುವ ಅಪೂರ್ಣ ಕಾಮಗಾರಿಗಳ ಕುರಿತು ನಡೆದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಸಚಿವರು ಮಾತನಾಡಿದರು.

ಸರ್ಕಾರದ ಮಹಾತ್ವಾಕಾಂಕ್ಷಿ ಯೋಜನೆಯ ಸೌಲಭ್ಯ ಬಡಜನರಿಗೆ ತಲುಪಿಸುವ ಮಹತ್ತರ ಜವಾಬ್ದಾರಿ ಇಲಾಖೆಯ ಅಧಿಕಾರಿಗಳದ್ದಾಗಿದೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ವಿಶೇಷ ಆಸಕ್ತಿಯಿಂದ ಬಾಕಿ ಉಳಿದಿರುವ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು.

ಬಡವರು ಮತ್ತು ಕಾರ್ಮಿಕರಿಗೆ ಕೈಗೆಟಕುವ ದರದಲ್ಲಿ ಊಟ, ಉಪಹಾರ ಒದಗಿಸುವ ಮಹಾತ್ವಾಕಾಂಕ್ಷಿ ಇಂದಿರಾ ಕ್ಯಾಂಟೀನ್ ಯೋಜನೆಯು ಅನುಷ್ಠಾನಗೊಂಡಿದೆ.

ನಗರದ ಪಂಡಿತ ಪುಟ್ಟರಾಜ ಗವಾಯಿಗಳ ಬಸ್ ನಿಲ್ದಾಣದ ಆವರಣದಲ್ಲಿ ಆಗಸ್ಟ್ 15ರಂದು ಇಂದಿರಾ ಕ್ಯಾಂಟೀನ್ ಪ್ರಾರಂಭಿಸಲು ಕ್ರಮ ಕೈಗೊಳ್ಳಬೇಕು. ಈ ಕುರಿತು ಸಂಬಂಧಿತ ಅಧಿಕಾರಿ ವರ್ಗ ಕಾರ್ಯೋನ್ಮುಖವಾಗಬೇಕೆಂದು ಸಚಿವರು ನಿರ್ದೇಶನ ನೀಡಿದರು.

ಹಲವು ವರ್ಷದಿಂದ ತಾ.ಪಂ ಕಚೇರಿಯ ನೂತನ ಕಟ್ಟಡದ ನಿರ್ಮಾಣ ಕಾರ್ಯ ನಿಧಾನಗತಿಯಲ್ಲಿ ಸಾಗಿದೆ. ಪರಿಷ್ಕೃತ ಅಂದಾಜು ವೆಚ್ಚ ಪಡೆದು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ, ಅಧಿಕಾರಿಗಳು ನಿರಂತರ ಸಂಪರ್ಕದಲ್ಲಿದ್ದು ಸರ್ಕಾರದಿಂದ ಅನುದಾನ ಬಿಡುಗಡೆ ಸೇರಿದಂತೆ ಎಲ್ಲ ರೀತಿಯ ಒಪ್ಪಿಗೆ ಪಡೆದು ಕಾಮಗಾರಿ ಪೂರ್ಣಗೊಳಿಸಲು ಗಮನ ಹರಿಸಬೇಕೆಂದು ತಾ.ಪಂ ಕಾರ್ಯನಿರ್ವಹಣಾಧಿಕಾರಿ ಮಲ್ಲಯ್ಯ ಅವರಿಗೆ ಸೂಚಿಸಿದರು.

ಬೇಸಿಗೆಯಲ್ಲಿ ಅವಳಿ ನಗರಕ್ಕೆ ಕುಡಿಯುವ ನೀರಿನ ಸಮಸ್ಯೆ ತಗ್ಗಿಸಲು ಕೈಗೊಂಡ ನಿರ್ಮಾಣ ಕಾಮಗಾರಿಯನ್ನು ಪಾಪನಾಶಿ ಹತ್ತಿರ ನಿರ್ಮಿಸಲು ಉದ್ದೇಶಿಸಿ ಹಲವು ವರ್ಷಗಳೇ ಗತಿಸಿದರೂ ಕಾಮಗಾರಿ ಪ್ರಗತಿ ಸಾಧಿಸದ ಬಗ್ಗೆ ಸಚಿವರು ಅಸಮಾಧಾನ ವ್ಯಕ್ತಪಡಿಸಿ, ಇದಕ್ಕಿರುವ ತಾಂತ್ರಿಕ ಹಾಗೂ ಆರ್ಥಿಕ ತೊಂದರೆಗಳ ಪರಿಹಾರಕ್ಕೆ ಶೀಘ್ರವಾಗಿ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದರು.

ಅಂಧ, ಅನಾಥರ ಬಾಳಿನಲ್ಲಿ ನಿರಂತರ ಜ್ಯೋತಿಯಾಗಿ ಬೆಳಗುತ್ತಿರುವ ನಗರದ ಲಿಂ. ಪಂಡಿತ ಪುಟ್ಟರಾಜ ಗವಾಯಿಗಳವರ ಸ್ಮಾರಕ ಭವನದ ಎಲ್ಲ ಹಂತದ ನಿರ್ಮಾಣ ಕಾಮಗಾರಿಯನ್ನು ಪೂರ್ಣಗೊಳಿಸಬೇಕು. ಇದಕ್ಕೆ ಅಗತ್ಯವಿರುವ ಪರಿಷ್ಕೃತ ಅಂದಾಜು ಪಟ್ಟಿಯನ್ನು ಇಂದೇ ತಯಾರಿಸಿ ಪ್ರಸ್ತಾವನೆ ಸಲ್ಲಿಸುವಂತೆ ಸಚಿವರು ಲೋಕೋಪಯೋಗಿ ಇಲಾಖೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಧಿಕಾರಿಗಳಿಗೆ ಆದೇಶಿಸಿದರು. ಸಭೆಯಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಚಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟ್ಟೂರ, ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರ ರಮೇಶ ಪಾಟೀಲ, ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

> ಜಿಲ್ಲೆಯ ಸ್ಥಳೀಯ ಸಂಸ್ಥೆಗಳಲ್ಲಿ ಮಂಜೂರಾಗಿರುವ ಒಟ್ಟು ಪೌರಕಾರ್ಮಿಕರ ಹುದ್ದೆಗಳು ಹಾಗೂ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಖಾಯಂ ಪೌರಕಾರ್ಮಿಕರ ಸಂಖ್ಯೆ ಮತ್ತು ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರ ವಿವರಗಳನ್ನು ಸಲ್ಲಿಸಬೇಕು. ಜೊತೆಗೆ ಪೌರಕಾರ್ಮಿಕರನ್ನು ಖಾಯಂಗೊಳಿಸುವ ಕುರಿತು ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ನಗರಸಭೆ ಅಧಿಕಾರಿಗಳಿಗೆ ಸಚಿವ ಡಾ. ಎಚ್.ಕೆ. ಪಾಟೀಲ ತಿಳಿಸಿದರು.

> ಗಂಗಿಮಡಿಯಲ್ಲಿ ಬಡವರಿಗಾಗಿ ಜಿ+ ಮಾದರಿಯಲ್ಲಿನ 3630 ಮನೆಗಳ ಸಮುಚ್ಛಯ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದ್ದು, ಕಾಮಗಾರಿಗಳನ್ನು ತೀವ್ರಗತಿಯಲ್ಲಿ ಪೂರ್ಣಗೊಳಿಸಲು ಇರುವ ತಾಂತ್ರಿಕ ತೊಂದರೆಗಳಿಗೆ ಪರಿಹಾರ ಕಂಡುಕೊಳ್ಳಿ. ಸರ್ಕಾರದ ಹಂತದಲ್ಲಿ ದೊರೆಯಬೇಕಾದ ಅನುಮೋದನೆಗಳಿದ್ದಲ್ಲಿ ತಮ್ಮ ಗಮನಕ್ಕೆ ತರುವ ಮೂಲಕ ಪರಿಹಾರ ಕಂಡುಕೊಳ್ಳಬೇಕು. ಒಟ್ಟಾರೆ ಬಡವರಿಗಾಗಿ ನಿರ್ಮಿಸುತ್ತಿರುವ ವಸತಿ ಸಮುಚ್ಛಯ ಕಾಮಗಾರಿ ಪೂರ್ಣಗೊಳಿಸಲು ಅಧಿಕಾರಿಗಳು ಶ್ರಮಿಸಿ.
>
> **– ಎಚ್.ಕೆ. ಪಾಟೀಲ.**
> ಜಿಲ್ಲಾ ಉಸ್ತುವಾರಿ ಸಚಿವರು.

### ಜೀವನ ಸಾರ್ಥಕತೆ ವೆಬ್‌ಸೈಟ್ ಮೂಲಕ ಅಂಗಾಂಗ ದಾನಕ್ಕೆ ಅವಕಾಶ: ಸಚಿವ ಎಚ್.ಕೆ. ಪಾಟೀಲ

# ಅಂಗಾಂಗ ದಾನದಿಂದ ಸಾವಿನಲ್ಲೂ ಸಾರ್ಥಕತೆ




> ಒಂದು ಅಂಗಾಂಗ ದಾನದಿಂದ ಒಬ್ಬ ವ್ಯಕ್ತಿಯ ಜೀವ ಹಾಗೂ ಜೀವನ ಉಳಿಸಬಹುದು. ಅದರಂತೆ ಇಡೀ ದೇಹದಾನದಿಂದ ಹಲವರ ಜೀವ ಉಳಿಸಬಹುದಾಗಿದೆ. ಸಾರ್ವಜನಿಕರು ಅಂಗಾಂಗ ದಾನದ ಬಗ್ಗೆ ಅರಿವು ಹೊಂದುವ ಮೂಲಕ ಅಂಗಾಂಗ ದಾನಕ್ಕೆ ಜೀವನ ಸಾರ್ಥಕತೆ ವೆಬ್‌ಸೈಟ್ ಮೂಲಕ ನೋಂದಾಯಿಸಿಕೊಳ್ಳಬೇಕು ಎಂದು ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.



**■ ವಿಜಯಸಾಕ್ಷಿ ಸುದ್ದಿ, ಗದಗ**

'ಜೀವನ ಸಾರ್ಥಕತೆ' ಎಂಬ ವೆಬ್‌ಸೈಟ್ ಮೂಲಕ ಅಂಗಾಂಗ ದಾನಕ್ಕೆ ಸರ್ಕಾರ ಅವಕಾಶ ನೀಡಿದೆ. ಅಂಗಾಂಗ ದಾನ ಮಾಡುವ ಮೂಲಕ ಸಾವಿನಲ್ಲೂ ಸಾರ್ಥಕತೆ ಕಾಣುವ ಸಾಧನೆಗೆ ಮುಂದಾಗಬಹುದಾಗಿದೆ ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಗದಗ ನಗರದ ಪತ್ರಿಕಾಭವನದಲ್ಲಿ ಮಂಗಳವಾರ ಜರುಗಿದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಅಂಗಾಂಗ ದಾನ ಮಾಡುವ ಮೂಲಕ ಮತ್ತೊಬ್ಬರ ಜೀವ ಹಾಗೂ ಜೀವನ ಉಳಿಸಿದ ನೆಮ್ಮದಿ ನಿಮ್ಮದಾಗಲಿದೆ ಎಂದರು.

ನಗರದ ಯಲ್ಲಪ್ಪ ಕಾಂಬಳೇಕರ್ ಅವರು ಅಂಗಾಂಗ ದಾನಕ್ಕೆ ಮುಂದಾಗುವ ಮೂಲಕ ಗದಗನಲ್ಲಿ ಮೂರನೆಯವರಾಗಿದ್ದಾರೆ. ಇಂದು ಅವರ ನಿವಾಸಕ್ಕೆ ತೆರಳಿ ದಿವಂಗತ ಯಲ್ಲಪ್ಪ ಕಾಂಬಳೇಕರ್ ಅವರ ಆತ್ಮಕ್ಕೆ ಸದ್ಗತಿ ದೊರೆಯಲೆಂದು ಪ್ರಾರ್ಥಿಸಲಾಯಿತು. ಅವರ ಪತ್ನಿ ಗೀತಾಬಾಯಿ ಕಾಂಬಳೇಕರ್, ಮಗ ಅಭಿಷೇಕ, ಸಹೋದರರಾದ ಶಿವಾಜಿ ಹಾಗೂ ಭರತ್ ದಿವಂಗತ ಯಲ್ಲಪ್ಪ ಕಾಂಬಳೇಕರ್ ಅವರ ಅಂಗಾಂಗ ದಾನಕ್ಕೆ ಸಹಕಾರ ನೀಡಿದ್ದಕ್ಕಾಗಿ ಧನ್ಯವಾದಗಳನ್ನು ತಿಳಿಸಲಾಯಿತು ಎಂದು ಸಚಿವರು ತಿಳಿಸಿದರು.

ಯಲ್ಲಪ್ಪ ಕಾಂಬಳೇಕರ್ ಅವರು ದಾನ ಮಾಡಿದ ಕಿಡ್ನಿಯನ್ನು ರೂರಲ್ ಮೆಡಿಕಲ್ ಸೊಸೈಟಿಯ ಹುಲಕೋಟಿ ಕೆ.ಎಚ್. ಪಾಟೀಲ ಆಸ್ಪತ್ರೆಯಲ್ಲಿ 27 ವರ್ಷದ ಯುವತಿಗೆ ಕಸಿ ಮಾಡಲಾಗಿದ್ದು, ಪ್ರಯತ್ನ ಯಶಸ್ವಿಯಾಗಿದೆ. ಹುಲಕೋಟಿಯ ಕೆ.ಎಚ್. ಪಾಟೀಲ ರೂರಲ್ ಆಸ್ಪತ್ರೆಯಲ್ಲಿ ಕಿಡ್ನಿ ಕಸಿ ಆಪರೇಷನ್ ಆರಂಭವಾದ ಮೇಲೆ ವೈದ್ಯರ ಪ್ರಯತ್ನದಿಂದ ಹೊಸ ವಾತಾವರಣ ಸೃಷ್ಟಿಯಾಗಿದೆ ಎಂದು ಹೇಳಿದರು.

▶▶ 3ನೇ ಪುಟಕ್ಕೆ

### ಅಂತಾರಾಷ್ಟ್ರೀಯ ಮಾದಕ ವಸ್ತುಗಳ ವಿರೋಧಿ ದಿನಾಚರಣೆ ನಿಮಿತ್ತ ಬೈಕ್ ರ‍್ಯಾಲಿ

# ಮಾದಕ ವಸ್ತುಗಳ ಮೋಹಕ್ಕೆ ಸಿಲುಕದಿರಿ



**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮನುಷ್ಯ ಜೀವನ ಅತ್ಯಮೂಲ್ಯವಾಗಿದ್ದು, ಅಮಲು ಬರಿಸುವ ಮಾದಕ ವಸ್ತುಗಳ ಸೇವನೆಯಿಂದ ದೈಹಿಕ ಹಾಗೂ ಮಾನಸಿಕ ಕಾಯಿಲೆಗೆ ಒಳಗಾಗಿ ಜೀವನವೇ ಹಾಳಾಗುತ್ತದೆ. ಇದು ಕೇವಲ ವ್ಯಕ್ತಿ, ಕುಟುಂಬ, ಸಮಾಜಕ್ಕಷ್ಟೇ ಅಲ್ಲದೇ ಇಡೀ ಮನುಕುಲದ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ. ಆದ್ದರಿಂದ ಯಾರೊಬ್ಬರೂ ಮಾದಕ ವಸ್ತುಗಳ ಮೋಹಕ್ಕೆ ಸಿಲುಕಬಾರದು ಎಂದು ತಹಸೀಲ್ದಾರ ವಾಸುದೇವ ಸ್ವಾಮಿ ಹೇಳಿದರು. ಅವರು ಮಂಗಳವಾರ ಲಕ್ಷ್ಮೇಶ್ವರ ಪೊಲೀಸ್ ಠಾಣಾ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಅಂತಾರಾಷ್ಟ್ರೀಯ

▶▶ 3ನೇ ಪುಟಕ್ಕೆ

> ಸಿಪಿಐ ನಾಗರಾಜ ಮಾಡಳ್ಳಿ ಮಾತನಾಡಿ, ಮಾದಕ ವಸ್ತುಗಳ ಮಾರಾಟ ಹಾಗೂ ಸಾಗಾಣಿಕೆ ಕಾನೂನ ಬಾಹಿರ ಎಂದು ಗೊತ್ತಿದ್ದರೂ ಮಾದಕ ವಸ್ತುಗಳ ದುಶ್ಚಟಗಳಿಗೆ ಯುವಕರು ಹೆಚ್ಚು ಬಲಿಯಾಗುತ್ತಿದ್ದಾರೆ. ಯುವಕರು ಕುಡಿತ, ಗುಟ್ಕಾ, ಗಾಂಜಾ, ಅಫೀಮು ಇತ್ಯಾದಿಗಳಿಂದ ದೂರವಿರಬೇಕು. ದುಶ್ಚಟಗಳಿಗೆ ಬಲಿಯಾಗಿ ಆರೋಗ್ಯ, ಸಮಯ ಹಾಳು ಮಾಡಿಕೊಳ್ಳದಿರುವ ಬಗ್ಗೆ ಎಚ್ಚರಿಕೆ ವಹಿಸಬೇಕು. ಕಾನೂನಿನ ಹೊರತಾಗಿಯೂ ಪ್ರತಿಯೊಬ್ಬ ನಾಗರಿಕನೂ ಈ ಬಗ್ಗೆ ಜಾಗೃತಿ ಹೊಂದಿ ವಿಶ್ವವನ್ನು ಮಾದಕವಸ್ತುಗಳಿಂದ ಮುಕ್ತವಾಗಿಸುವ ಜವಾಬ್ದಾರಿ ತೆಗೆದುಕೊಳ್ಳಬೇಕಿದೆ ಎಂದರು.

### ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿಯವರನ್ನು ಪ್ರಶ್ನಿಸಿದ ಸಚಿವ ಎಚ್.ಕೆ. ಪಾಟೀಲ

# ನಿಮ್ಮ ಅವಧಿಯಲ್ಲಿ ಕಣ್ಮುಚ್ಚಿ ಕೂತಿದ್ದಿರಾ?

**■ ವಿಜಯಸಾಕ್ಷಿ ಸುದ್ದಿ, ಗದಗ**




ರಾಜ್ಯದಲ್ಲಿ ಅಕ್ರಮ ಗಣಿಗಾರಿಕೆಯ ನಡೆ ಕುರಿತು ಎಲ್ಲ ವಿವರಗಳೊಂದಿಗೆ ಸುದೀರ್ಘವಾಗಿ ಪತ್ರ ಬರೆದಿದ್ದೇನೆ. ಈ ಪತ್ರಕ್ಕೆ ಕೇಂದ್ರ ಸಚಿವ ಕುಮಾರಸ್ವಾಮಿ ಅವರು ಕುಂಭಕರ್ಣ, ರಾವಣ ಎಂಬ ಪೌರಾಣಿಕ ಪಾತ್ರಗಳ ಹೆಸರನ್ನು ತೆಗೆದುಕೊಂಡು ಪತ್ರವನ್ನು ಕಸದ ಬುಟ್ಟಿ ಎಸೆಯಬೇಕು ಎಂದು ಹೇಳಿದ್ದಾರೆ. ಆ ಪತ್ರ ಕಸದ ಬುಟ್ಟಿಗೋ, ಕ್ರಮದ ತೊಟ್ಟಿಗೋ ಎಂಬುದನ್ನು ಯಾರಿಗೆ ಪತ್ರ ಬರೆದಿದ್ದೇನೋ ಅವರು ನಿರ್ಣಯಿಸುತ್ತಾರೆ ಎಂದು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿಎಂ ಸಿದ್ದರಾಮಯ್ಯ ಅವರು ಕಳೆದ ಹಾಗೂ ಈಗಿನ ಅವಧಿಯಲ್ಲಿ ಸಿಎಂ ಆಗಿದ್ದಾಗ ಕಣ್ಣು ಮುಚ್ಚಿ ಕುಳಿತಿದ್ದರಾ ಎಂಬ ಎಚ್.ಡಿ. ಕುಮಾರಸ್ವಾಮಿಯವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ನೀವು ಸಿಎಂ ಆಗಿದ್ದಾಗ ಅಕ್ರಮದ ವರದಿಗಳು ನಿಮ್ಮ ಕೈಯಲ್ಲಿದ್ದವು. ನೀವು ಅಭಿಷೇಕ ಮಾಡುತ್ತ ಕುಳಿತಿದ್ದಿರಾ ಎಂದು ಮರುಪ್ರಶ್ನಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾಜಿ ಶಾಸಕ ಡಿ.ಆರ್. ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಗದಗ ತಾಲೂಕಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಸಿದ್ಧು ಪಾಟೀಲ, ಫಾರೂಕ್ ಹುಬ್ಬಳ್ಳಿ ಹಾಜರಿದ್ದರು.

> ರಾಜ್ಯದಲ್ಲಿ 1.50 ಲಕ್ಷ ಕೋಟಿ. ರೂ. ಮೊತ್ತದ ಅಕ್ರಮ ಗಣಿಗಾರಿಕೆ ಸಂಪತ್ತು ಕನ್ನಡಿಗರಿಗೆ ವಾಪಾಸ್ ತರಬೇಕೆನ್ನುವುದು ನನ್ನ ಪತ್ರದ ಉದ್ದೇಶವಾಗಿದೆ.
>
> ಕುಮಾರಸ್ವಾಮಿ ಅವರೇ ನೀವು ದೊಡ್ಡ ಸ್ಥಾನದಲ್ಲಿದ್ದೀರಿ. ವ್ಯವಸ್ಥೆಗೆ ಸವಾಲಾಗಿರುವ ಅಕ್ರಮ ಲೂಟಿ ಗುನ್ನೆಯಿಂದ ನಷ್ಟವಾಗಿರುವ ಅಮೂಲ್ಯವಾಗಿರುವ ಸಂಪತ್ತು ಹಾಗೂ ಅದರ ಮೌಲ್ಯವನ್ನು ಕನ್ನಡಿಗರಿಗೆ ವಾಪಸ್ ತರಲು ಅಡಿಯಿಡಿ ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

### ಕಪ್ಪತಗುಡ್ಡದ 322 ಚದರ ಕಿ.ಮೀ ಪ್ರದೇಶ ಪರಿಸರ ಸೂಕ್ಷ್ಮ ಪ್ರದೇಶವಾಗಿ ಅಂತಿಮ ಅಧಿಸೂಚನೆ: ಸಚಿವ ಎಚ್.ಕೆ. ಪಾಟೀಲ

# ಕಪ್ಪತಗುಡ್ಡ ವನ್ಯಜೀವಿ ಧಾಮ 'ಪರಿಸರ ಸೂಕ್ಷ್ಮ ವಲಯ'



**■ ವಿಜಯಸಾಕ್ಷಿ ಸುದ್ದಿ, ಗದಗ**

ಕಪ್ಪತಗುಡ್ಡ ವನ್ಯಜೀವಿ ಧಾಮವು 'ಪರಿಸರ ಸೂಕ್ಷ್ಮ ವಲಯ' ಎಂದು ಕೇಂದ್ರ ಅರಣ್ಯ ಪರಿಸರ ಹಾಗೂ ಹವಾಮಾನ ಬದಲಾವಣೆ ಸಚಿವಾಲಯದಿಂದ ಅಂತಿಮ ಅಧಿಸೂಚನೆ ಹೊರಡಿಸಲಾಗಿದೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.

ನಗರದ ಪತ್ರಿಕಾಭವನದಲ್ಲಿ ಮಂಗಳವಾರ ಜರುಗಿದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಗದಗಿನ ಕಪ್ಪತಗುಡ್ಡ ರಕ್ಷಣೆಗೆ ಈ ಹಿಂದೆ ನಡೆದ ಹೋರಾಟವನ್ನು ನೆನಪಿಸಿಕೊಂಡರು.

ಗದುಗಿನ ತೋಂಟದಾರ್ಯ ಶ್ರೀಗಳ ನೇತೃತ್ವದಲ್ಲಿ ಜರುಗಿದ ಹೋರಾಟದ ಫಲವಾಗಿ ಇಂದು ಕಪ್ಪತಗುಡ್ಡ ಸಂರಕ್ಷಣೆಯಾಗಿದೆ. ಜಿಲ್ಲೆಯ ಜನತೆ ಶುದ್ಧ ಗಾಳಿ, ಪರಿಸರ ಸವಿಯಲು ಸಾಧ್ಯವಾಗಿದೆ. ಅರಣ್ಯ ಸಚಿವ ಈಶ್ವರ ಖಂಡ್ರೆ ಅವರ ವಿಶೇಷ ಆಸಕ್ತಿ ಹಾಗೂ ಗಂಭೀರ ಕೆಲಸದ ಮೂಲಕ ಕಪ್ಪತಗುಡ್ಡ ಸೂಕ್ಷ್ಮ ಪ್ರದೇಶವಾಗಿದೆ. ಮುಖ್ಯಮಂತ್ರಿ ಸಿದ್ಧರಾಮಯ್ಯನವರ ಮಾರ್ಗದರ್ಶನದಲ್ಲಿ ಈ ಕಾರ್ಯ ಸಾಧ್ಯವಾಗಿದೆ ಎಂದು ಹೇಳಿದರು.

ಈ ಹಿಂದೆ ಕರಡು ಅಧಿಸೂಚನೆ ಹೊರಡಿಸಿ ಆಕ್ಷೇಪಣೆ ಸಲ್ಲಿಸಲು 60 ದಿನಗಳ ಕಾಲಾವಕಾಶ ನೀಡಲಾಗಿತ್ತು. ಅದಾದ ಬಳಿಕ ಅಂತಿಮ ಅಧಿಸೂಚನೆ ಸಂಖ್ಯೆ:2485, 4–06–2025ರಂದು ಆದೇಶ ಹೊರಡಿಸಿದೆ. ಕಪ್ಪತ್ತಗುಡ್ಡ ವ್ಯಾಪ್ತಿಯು ಜಿಲ್ಲೆಯ ಮುಂಡರಗಿ, ಗದಗ, ಶಿರಹಟ್ಟಿ–ಲಕ್ಷ್ಮೇಶ್ವರ ತಾಲೂಕಿನ ವ್ಯಾಪ್ತಿಯಲ್ಲಿ ಹರಡಿದೆ. ಪರಿಸರ ಸೂಕ್ಷ್ಮ ಪ್ರದೇಶದಲ್ಲಿ ಕಂದಾಯ ಗ್ರಾಮಗಳ 298.89 ಚದರ ಕಿ.ಮೀ ಹಾಗೂ ಅಧಿಸೂಚಿತ ಅರಣ್ಯ ಸೇರಿದೆ. ಈ ಪ್ರದೇಶದಲ್ಲಿ 62 ಪ್ರದೇಶಗಳ 23.80 ಕಿ.ಮೀ ಗ್ರಾಮಗಳಿವೆ.

▶▶ 3ನೇ ಪುಟಕ್ಕೆ

> **ಅನುಮೋದಿತ ಚಟುವಟಿಕೆಗಳು**
>
> ಮಳೆ ನೀರು ಕೊಯ್ಲು, ಸಾವಯವ ಕೃಷಿ ಇತ್ಯಾದಿ ಎಲ್ಲಾ ಚಟುವಟಿಕೆಗಳಿಗೆ ಹಸಿರು ತಂತ್ರಜ್ಞಾನದ ಅಳವಡಿಕೆ, ಸ್ಥಳೀಯ ಸಮುದಾಯಗಳಿಂದ ನಡೆಯುತ್ತಿರುವ ಕೃಷಿ ಮತ್ತು ತೋಟಗಾರಿಕೆ ಪದ್ಧತಿಗಳು, ಈ ಕೆಲವು ಚಟುವಟಿಕೆಗಳ ಅತಿಯಾದ ವಿಸ್ತರಣೆಯನ್ನು ಮಾಸ್ಟರ್ ಯೋಜನೆಯ ಪ್ರಕಾರ ನಿಯಂತ್ರಿಸಬೇಕು. ನವೀಕರಿಸಬಹುದಾದ ಇಂಧನ ಮತ್ತು ಶುದ್ಧ ಇಂಧನಗಳ ಬಳಕೆ, ಜೈವಿಕ ಅನಿಲ, ಸೌರಶಕ್ತಿ, ಸಿಎನ್‌ಜಿ, ಎಲ್‌ಪಿಜಿ ಇತ್ಯಾದಿಗಳು, ಕೃಷಿ–ಅರಣ್ಯ, ಪರಿಸರ ಸ್ನೇಹಿ ಸಾರಿಗೆಯ ಬಳಕೆ, ಕ್ಷೀಣಿಸಿದ ಭೂಮಿ/ಅರಣ್ಯಗಳು/ಆವಾಸಸ್ಥಾನದ ಪುನಃಸ್ಥಾಪನೆ, ಪರಿಸರ ಜಾಗೃತಿ ಈ ಎಲ್ಲ ಚಟುವಟಿಕೆ ಕೈಗೊಳ್ಳಲು ಅನುಮತಿಸಲಾಗಿದೆ.

ಸಂಪಾದಕೀಯ

# ಮೊಬೈಲ್ ಬಿಡಿ-ಪುಸ್ತಕ ಹಿಡಿ: ನವ ಸಾಕ್ಷರತಾ ಆಂದೋಲನ

ಇಂದಿನ ಡಿಜಿಟಲ್ ಯುಗದಲ್ಲಿ ಮೊಬೈಲ್ ಫೋನ್‌ಗಳು ನಮ್ಮ ಜೀವನದ ಅವಿಭಾಜ್ಯ ಅಂಗವಾಗಿವೆ. ಶಿಕ್ಷಣದಿಂದ ಮನರಂಜನೆಯವರೆಗೆ ಎಲ್ಲದಕ್ಕೂ ಮೊಬೈಲ್ ಅವಲಂಬನೆ ಹೆಚ್ಚುತ್ತಿದೆ. ಆದರೆ, ಈ ಅತಿಯಾದ ಬಳಕೆ ವಿದ್ಯಾರ್ಥಿಗಳ ಕಲಿಕೆಯ ಮೇಲೆ ಮತ್ತು ಸಾರ್ವಜನಿಕರ ಓದುವ ಹವ್ಯಾಸದ ಮೇಲೆ ನಕಾರಾತ್ಮಕ ಪರಿಣಾಮ ಬೀರುತ್ತಿದೆ ಎಂಬುದನ್ನು ಅಲ್ಲಗಳೆಯಲಾಗದು.

ಇಂತಹ ಸನ್ನಿವೇಶದಲ್ಲಿ, ರಾಮನಗರ ತಾಲೂಕಿನ ಬಿಡದಿ ಹೋಬಳಿಯ ಬನ್ನಿಕುಪ್ಪೆ(ಬಿ) ಕ್ಲಸ್ಟರ್‌ನ ಸಮೂಹ ಸಂಪನ್ಮೂಲ ಶಿಕ್ಷಕರಾದ ಚಿಕ್ಕವೀರಯ್ಯ ಟಿ.ಎನ್. ಹಾಗೂ ಅವರ ಶಿಕ್ಷಕರ ತಂಡ ಹಮ್ಮಿಕೊಂಡಿರುವ "ಮೊಬೈಲ್ ಬಿಡಿ-ಪುಸ್ತಕ ಹಿಡಿ" ಅರಿವಿನ ಅಭಿಯಾನ ಅತ್ಯಂತ ಶ್ಲಾಘನೀಯ ಮತ್ತು ದೂರದೃಷ್ಟಿಯ ಕ್ರಮವಾಗಿದೆ.

ಈ ವಿಶಿಷ್ಟ ಅಭಿಯಾನವು ವಿದ್ಯಾರ್ಥಿಗಳು, ಪೋಷಕರು ಮತ್ತು ಸಾರ್ವಜನಿಕರಲ್ಲಿ ಮೊಬೈಲ್ ಬಳಕೆಯ ಪ್ರಮಾಣವನ್ನು ಕಡಿಮೆ ಮಾಡಿ, ಪುಸ್ತಕ ಓದುವ ಅಭಿರುಚಿಯನ್ನು ಬೆಳೆಸುವ ಮಹತ್ತರ ಉದ್ದೇಶ ಹೊಂದಿದೆ. ತಂತ್ರಜ್ಞಾನದ ಪ್ರವಾಹದಲ್ಲಿ ಪುಸ್ತಕಗಳು ಕಣ್ಮರೆಯಾಗುತ್ತಿರುವ ಈ ಹೊತ್ತಿನಲ್ಲಿ, ಓದುವ ಸಂಸ್ಕೃತಿಯನ್ನು ಪುನರುಜ್ಜೀವನಗೊಳಿಸಲು ಇಂತಹ ಉಪಕ್ರಮಗಳು ಅತ್ಯಗತ್ಯವಾಗಿವೆ.

ಪುಸ್ತಕಗಳು ಜ್ಞಾನದ ಆಗರ. ಅವು ನಮ್ಮ ಆಲೋಚನಾ ಶಕ್ತಿಯನ್ನು ವಿಸ್ತರಿಸುತ್ತವೆ, ಭಾಷಾ ಕೌಶಲ್ಯವನ್ನು ಸುಧಾರಿಸುತ್ತವೆ, ಕಲ್ಪನಾ ಶಕ್ತಿಯನ್ನು ಹೆಚ್ಚಿಸುತ್ತವೆ ಮತ್ತು ವಿಮರ್ಶಾತ್ಮಕ ಚಿಂತನೆಗೆ ಉತ್ತೇಜನ ನೀಡುತ್ತವೆ. ಆದರೆ, ಮೊಬೈಲ್‌ಗಳ ಅತಿಯಾದ ಬಳಕೆ ಏಕಾಗ್ರತೆಯ ಕೊರತೆ, ಕಣ್ಣಿನ ಸಮಸ್ಯೆಗಳು, ನಿದ್ರಾಹೀನತೆ ಮತ್ತು ಸಾಮಾಜಿಕ ಕೌಶಲ್ಯಗಳ ಕುಂಠಿತಕ್ಕೆ ಕಾರಣವಾಗಬಹುದು. ಈ ಅಭಿಯಾನವು ಈ ಸಮಸ್ಯೆಗಳನ್ನು ಪರಿಹರಿಸಲು ಒಂದು ಸಕಾರಾತ್ಮಕ ಹೆಜ್ಜೆಯಾಗಿದೆ.

ಚಿಕ್ಕವೀರಯ್ಯ ಟಿ.ಎನ್. ಮತ್ತು ಅವರ ತಂಡದ ಈ ಪ್ರಯತ್ನವು ಕೇವಲ ಬನ್ನಿಕುಪ್ಪೆ(ಬಿ) ಕ್ಲಸ್ಟರ್‌ಗೆ ಸೀಮಿತವಾಗದೆ, ಇಡೀ ರಾಜ್ಯಕ್ಕೆ ಮಾದರಿಯಾಗುವ ಸಾಮರ್ಥ್ಯ ಹೊಂದಿದೆ. ಇಂತಹ ಅಭಿಯಾನಗಳು ಶಿಕ್ಷಣ ಇಲಾಖೆ ಮತ್ತು ಸಾರ್ವಜನಿಕ ಸಹಭಾಗಿತ್ವದಲ್ಲಿ ವ್ಯಾಪಕವಾಗಿ ಜಾರಿಗೆ ಬರಬೇಕು. ಮೊಬೈಲ್ ಬಿಡಿ-ಪುಸ್ತಕ ಹಿಡಿ ಕೇವಲ ಒಂದು ಘೋಷಣೆಯಾಗದೆ, ಒಂದು ಬೃಹತ್ ಜನಪ್ರಿಯ ಆಂದೋಲನವಾಗಿ ರೂಪುಗೊಂಡು, ಜ್ಞಾನಯುತ ಸಮಾಜ ನಿರ್ಮಾಣಕ್ಕೆ ಅಡಿಪಾಯ ಹಾಕಲಿ ಎಂದು ಹಾರೈಸೋಣ.

ಅನಂತ ಹುದೆಂಗಜೆಯವರ 'ಸಿರಿ-ಸರಿ': ಸಿರಿಧಾನ್ಯಗಳ ಸಮಗ್ರ ಕೋಶ ಪುಸ್ತಕ ಪರಿಚಯ

# ಸಿರಿಧಾನ್ಯಗಳ ಕುರಿತಾದ ಸಮಗ್ರ ಮಾಹಿತಿ

ಇತ್ತೀಚಿನ ದಶಕಗಳಲ್ಲಿ ಆಹಾರ ಮತ್ತು ಆರೋಗ್ಯದ ಕುರಿತಾದ ಅರಿವು ಹೆಚ್ಚುತ್ತಿದ್ದಂತೆ, ನಮ್ಮ ಸಾಂಪ್ರದಾಯಿಕ ಆಹಾರ ಪದ್ಧತಿಗಳ ಕಡೆಗೆ ಜಗತ್ತು ಮತ್ತೆ ಮುಖ ಮಾಡುತ್ತಿದೆ. ಈ ಪರಿವರ್ತನೆಯಲ್ಲಿ ಸಿರಿ ಧಾನ್ಯಗಳು ಪ್ರಮುಖ ಪಾತ್ರ ವಹಿಸುತ್ತಿವೆ. ಇಂತಹ ಸಮಯದಲ್ಲಿ, ಸಿರಿ ಧಾನ್ಯಗಳ ಮಹತ್ವವನ್ನು ಜನಸಾಮಾನ್ಯರಿಗೆ ತಲುಪಿಸುವಲ್ಲಿ ಅನಂತ ಹುದೆಂಗಜೆ ಅವರು ಬರೆದಿರುವ 'ಸಿರಿ-ಸರಿ' ಪುಸ್ತಕವು ಒಂದು ಮಹತ್ವದ ಕೊಡುಗೆಯಾಗಿದೆ.




ಇದು ಅಡುಗೆ ಪುಸ್ತಕವಂತೂ ಅಲ್ಲವೇ ಅಲ್ಲ. ಬದಲಿಗೆ ಸಿರಿ ಧಾನ್ಯಗಳ ಸಮಗ್ರ ಜ್ಞಾನಕೋಶವಾಗಿ ಹೊರಹೊಮ್ಮಿದೆ. ಈ ಕ್ಷೇತ್ರದಲ್ಲಿ ಸಾಕಷ್ಟು ಅಧ್ಯಯನವಿರುವ ಎನ್. ಜಯಶಂಕರ ಶರ್ಮ ಅವರು, 'ಇದು ವಿಶ್ವವಿದ್ಯಾಲಯಗಳ ಮಟ್ಟದಲ್ಲಿ ಸಂಶೋಧನೆಗೆ ಆಕರ ಗ್ರಂಥವಾಗಲು ಅರ್ಹತೆಯಿರುವ ಉತ್ಕೃಷ್ಟ ಕೃತಿ' ಎಂದು ಬಣ್ಣಿಸಿರುವುದರಲ್ಲಿ ಅತಿಶಯೋಕ್ತಿ ಇಲ್ಲ.

ಈ ಮೊದಲು ನಿಮಗೆಷ್ಟು ಹಣ ಬೇಕು, ಭಾರತ ಇಸ್ಲಾಂ ಮತ್ತು ಗಾಂಧಿ, ಇದುವೇ ನಮ್ಮ ಸಂಸ್ಕೃತಿ ಮುಂತಾದ ಸ್ವತಂತ್ರ ಕೃತಿಗಳು, ಎಂ.ವಿ. ಚಕ್ರಪಾಣಿ ಸಮಗ್ರ ಸಾಹಿತ್ಯದಂತಹ ಸಂಪಾದಿತ ಕೃತಿಗಳು ಮತ್ತು ಸಾವಿರಾರು ಲೇಖನಗಳ ಮೂಲಕ ಓದುಗರಿಗೆ ಪರಿಚಿತರಾಗಿರುವ ಅನಂತ ಹುದೆಂಗಜೆ ಅವರು ಈಗ 'ಸಿರಿಧಾನ್ಯ: ಸಿರಿ-ಸರಿ' ಕೃತಿಯ ಮೂಲಕ, ಸಿರಿಧಾನ್ಯಗಳ ಅಗಾಧ ಜಗತ್ತನ್ನು ಓದುಗರಿಗೆ ಪರಿಚಯಿಸಿದ್ದಾರೆ. ಪುಸ್ತಕವು ಅತ್ಯಂತ ಮಾಹಿತಿಪೂರ್ಣವಾಗಿದ್ದು, ಸಿರಿ ಧಾನ್ಯಗಳ ಕುರಿತಾದ ಅನೇಕ ಮಿಥ್ಯೆಗಳನ್ನು ನಿವಾರಿಸಿ, ಅವುಗಳ ನಿಜವಾದ ಸತ್ವವನ್ನೂ ಮಹತ್ವವನ್ನೂ ಅನಾವರಣಗೊಳಿಸಿದೆ.

'ಸಿರಿ-ಸರಿ' ಪುಸ್ತಕದ ಪ್ರಮುಖ ಆಕರ್ಷಣೆ, ಸಿರಿ ಧಾನ್ಯಗಳ ಇತಿಹಾಸದ ಕುರಿತು ನೀಡುವ ಅಮೂಲ್ಯ ಮಾಹಿತಿ. ಸೃಷ್ಟಿಯ ಆದಿಯಿಂದ ಮಾನವನ ಆಹಾರ ಪದ್ಧತಿಯಲ್ಲಿ ಸಿರಿ ಧಾನ್ಯಗಳ ಪಾತ್ರ ಎಂತಹದು, ಅವು ಕಾಲಾನುಕ್ರಮದಲ್ಲಿ ಹೇಗೆ ಬಳಕೆಗೆ ಬಂದವು ಎಂಬಂತಹ ಆಳವಾದ ವಿಶ್ಲೇಷಣೆಗಳನ್ನು ಲೇಖಕರು ಸರಳ ಮತ್ತು ಆಕರ್ಷಕ ಶೈಲಿಯಲ್ಲಿ ಪ್ರಸ್ತುತಪಡಿಸಿದ್ದಾರೆ. ಈ ಇತಿಹಾಸದ ಪ್ರಜ್ಞೆಯು, ಸಿರಿ ಧಾನ್ಯಗಳನ್ನು ಕೇವಲ ಆಹಾರವನ್ನಾಗಿ ನೋಡದೆ, ನಮ್ಮ ಸಂಸ್ಕೃತಿ ಮತ್ತು ಪರಂಪರೆಯ ಅವಿಭಾಜ್ಯ ಅಂಗವಾಗಿ ನೋಡಲು ಪ್ರೇರೇಪಿಸುತ್ತದೆ.

ಪುಸ್ತಕವು ಕೇವಲ ಇತಿಹಾಸಕ್ಕೆ ಸೀಮಿತವಾಗದೆ, ಸಿರಿ ಧಾನ್ಯಗಳ ಪೌಷ್ಟಿಕಾಂಶದ ಮೌಲ್ಯದ ಬಗ್ಗೆ ವಿಸ್ತೃತ ಮಾಹಿತಿ ನೀಡುತ್ತದೆ. ಪ್ರತಿ ಸಿರಿ ಧಾನ್ಯದಲ್ಲಿರುವ ವಿಟಮಿನ್‌ಗಳು, ಖನಿಜಗಳು, ನಾರಿನಂಶ, ಪ್ರೋಟೀನ್ ಮತ್ತು ಕಾರ್ಬೋಹೈಡ್ರೇಟ್‌ಗಳ ಕುರಿತು ವೈಜ್ಞಾನಿಕ ವಿವರಣೆಗಳನ್ನು ಹೊಂದಿದೆ. ಇದು ಓದುಗರಿಗೆ ತಮ್ಮ ಆರೋಗ್ಯಕ್ಕೆ ಯಾವ ಸಿರಿ ಧಾನ್ಯಗಳು ಹೆಚ್ಚು ಸೂಕ್ತ ಎಂಬುದನ್ನು ಅರಿಯಲು ಸಹಾಯ ಮಾಡುತ್ತದೆ. ಸಜ್ಜೆ, ನವಣೆ, ಸಾಮೆ, ಹಾರಕ, ಊದಲು ಇವುಗಳ ವೈಶಿಷ್ಟ್ಯಗಳು, ಆರೋಗ್ಯ ಪ್ರಯೋಜನಗಳು ಮತ್ತು ಇವುಗಳನ್ನು ಆಹಾರದಲ್ಲಿ ಹೇಗೆ ಅಳವಡಿಸಿಕೊಳ್ಳಬೇಕು ಎಂಬುದರ ಕುರಿತು ಲೇಖಕರು ಆಳವಾದ ತಿಳಿವಳಿಕೆ ನೀಡುತ್ತಾರೆ. ಮಧುಮೇಹ ನಿಯಂತ್ರಣದಿಂದ ಹಿಡಿದು ಹೃದಯದ ಆರೋಗ್ಯದವರೆಗೆ, ಸಿರಿ ಧಾನ್ಯಗಳು ಹೇಗೆ ನಮ್ಮ ಆರೋಗ್ಯವನ್ನು ಕಾಪಾಡಬಲ್ಲವು ಎಂಬುದನ್ನು ಅವರು ಉದಾಹರಣೆ ಸಹಿತ ವಿವರಿಸುತ್ತಾರೆ.

'ಸಿರಿ-ಸರಿ' ಪುಸ್ತಕದ ಮತ್ತೊಂದು ಪ್ರಮುಖ ಭಾಗವೆಂದರೆ ಸಿರಿ ಧಾನ್ಯಗಳನ್ನು ಬಳಸಿ ತಯಾರಿಸಬಹುದಾದ ಅಡುಗೆಗಳು. ಇದು ಕೇವಲ ಕೆಲವು ಪಾಕವಿಧಾನಗಳ ಸಂಗ್ರಹವಲ್ಲ, ಬದಲಿಗೆ ಸಿರಿ ಧಾನ್ಯಗಳನ್ನು ನಮ್ಮ ದಿನನಿತ್ಯದ ಆಹಾರದಲ್ಲಿ ಹೇಗೆ ಸುಲಭವಾಗಿ ಮತ್ತು ರುಚಿಕರವಾಗಿ ಅಳವಡಿಸಿಕೊಳ್ಳಬಹುದು ಎಂಬುದರ ಕುರಿತು ಪ್ರಾಯೋಗಿಕ ಮಾರ್ಗದರ್ಶನ ನೀಡುತ್ತದೆ. ಸಾಂಪ್ರದಾಯಿಕ ಅಡುಗೆಗಳಿಂದ ಹಿಡಿದು, ನವೀನ ಖಾದ್ಯಗಳವರೆಗೆ ಅನೇಕ ಪಾಕವಿಧಾನಗಳನ್ನು ನೀಡಲಾಗಿದೆ.

ಪ್ರತಿ ಪಾಕವಿಧಾನವನ್ನು ಸ್ಪಷ್ಟವಾದ ಸೂಚನೆಗಳೊಂದಿಗೆ, ಸುಲಭವಾಗಿ ಅನುಸರಿಸುವಂತೆ ವಿನ್ಯಾಸಗೊಳಿಸಲಾಗಿದೆ. ಇದು ಓದುಗರಿಗೆ ಅಡುಗೆಮನೆಯಲ್ಲಿ ಹೊಸ ಪ್ರಯೋಗಗಳನ್ನು ಮಾಡಲು ಪ್ರೇರಣೆ ನೀಡುತ್ತದೆ. ಸಿರಿ ಧಾನ್ಯಗಳನ್ನು ಸಾಂಪ್ರದಾಯಿಕ ಆಹಾರಗಳಾಗಿ ಮಾತ್ರವೇ ನೋಡದೆ, ಅವುಗಳ ವೈವಿಧ್ಯಮಯ ಸಾಧ್ಯತೆಗಳನ್ನು ಅರಿಯಲು ಸಹಾಯ ಮಾಡುತ್ತದೆ. ಲೇಖಕರು ನೀಡಿರುವ ಅಡುಗೆ ವಿಧಾನಗಳು ಸರಳವಾಗಿದ್ದು, ಸಿರಿ ಧಾನ್ಯಗಳನ್ನು ಬಳಸಲು ಹಿಂಜರಿಯುವವರಿಗೂ ಪ್ರೋತ್ಸಾಹ ನೀಡುತ್ತವೆ.

ಅನಂತ ಹುದೆಂಗಜೆ ಅವರ ಬರವಣಿಗೆಯ ಶೈಲಿಯು ಅತ್ಯಂತ ಸರಳವೂ, ಆಕರ್ಷಕವೂ ಆಗಿದೆ. ಕ್ಲಿಷ್ಟವಾದ ವಿಷಯಗಳನ್ನು ಕೂಡ ಜನಸಾಮಾನ್ಯರಿಗೆ ಅರ್ಥವಾಗುವ ಭಾಷೆಯಲ್ಲಿ ವಿವರಿಸಿದ್ದಾರೆ. ಪುಸ್ತಕದ ವಿನ್ಯಾಸ ಮತ್ತು ಚಿತ್ರಣಗಳೂ ಓದುಗರನ್ನು ಆಕರ್ಷಿಸುತ್ತವೆ. ಲೇಖಕರು ಸಿರಿ ಧಾನ್ಯಗಳ ಕುರಿತು ಆಳವಾದ ಅಧ್ಯಯನ ನಡೆಸಿ, ವೈಯಕ್ತಿಕ ಅನುಭವಗಳನ್ನೂ ಹಂಚಿಕೊಂಡಿರುವುದು ಪುಸ್ತಕಕ್ಕೆ ಒಂದು ವಿಶಿಷ್ಟ ಆಯಾಮವನ್ನು ನೀಡುತ್ತದೆ. ಶ್ರೀ ಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆ ಹಾಗೂ ಮಾತೃಶ್ರೀ ಡಾ. ಹೇಮಾವತಿ ವೀ.ಹೆಗ್ಗಡೆಯವರು ಹಾರೈಕೆಯ ರೂಪದಲ್ಲಿ ಬರೆದಿರುವ ನುಡಿಗಳು ಮೌಲಿಕವಾಗಿವೆ. ಡಾ. ಎಲ್.ಎಚ್. ಮಂಜುನಾಥ್ ಅವರ ಪ್ರವೇಶಿಕೆಯು ಮತ್ತೊಂದು ಸ್ವತಂತ್ರ ಕೃತಿ ರಚಿಸುವಷ್ಟು ವಿಷಯಗಳನ್ನು ಹೊಂದಿದೆ. ಸಿರಿ ಘಟಕದ ನಿರ್ದೇಶಕ ದಿನೇಶ್ ಎಂ. ಕೆರ್ವಾಶೆ ಅವರ ಸಂದರ್ಶನ ಸಿರಿಧಾನ್ಯಗಳ ಕ್ಷೇತ್ರದ ಹೊಸ ಸಾಧ್ಯತೆಗಳನ್ನು ತೆರೆದಿಡುತ್ತದೆ. ವಿಷಯ ಮಂಡನೆಗೆ ಪೂರಕವಾಗಿ ವಿವಿಧ ಕ್ಷೇತ್ರಗಳಲ್ಲಿ ಪ್ರಸಿದ್ಧರಾಗಿರುವ ಗಣ್ಯರ ಬರೆಹಗಳನ್ನು ಬಳಸಿಕೊಂಡಿರುವುದು ಕೃತಿಗೆ ಹೊಸ ಮಜಲಿನ ವಿಸ್ತಾರವನ್ನು ನೀಡಿದೆ. ಈ ಪ್ರಯತ್ನ ಶ್ಲಾಘನೀಯ. ಸಿರಿ ಧಾನ್ಯ ಬೆಳೆದವರ ಅನುಭವಗಳನ್ನು ಸೇರಿಸಿದ್ದು ಪುಸ್ತಕದ ಮೌಲ್ಯವನ್ನು ದುಪ್ಪಟ್ಟಾಗಿಸಿದೆ.

ಅನಂತ ಹುದೆಂಗಜೆ ಅವರ 'ಸಿರಿ-ಸರಿ' ಸಿರಿ ಧಾನ್ಯಗಳ ಕುರಿತಾದ ಸಮಗ್ರ ಮಾಹಿತಿಯನ್ನು ಒದಗಿಸುವ, ಆಸಕ್ತಿಯಿಂದ ಓದುವಂತೆ ಮಾಡುವ ಒಂದು ಅದ್ಭುತ ಕೃತಿಯಾಗಿದೆ. ಪ್ರತಿಯೊಬ್ಬರೂ ತಮ್ಮ ಆರೋಗ್ಯವನ್ನು ಸುಧಾರಿಸಿಕೊಳ್ಳಲು ಮತ್ತು ಉತ್ತಮ ಜೀವನಶೈಲಿಯನ್ನು ಅಳವಡಿಸಿಕೊಳ್ಳಲು ಪ್ರೇರೇಪಿಸುತ್ತದೆ.

ಆಹಾರ ಪ್ರಿಯರು, ಆರೋಗ್ಯದ ಬಗ್ಗೆ ಕಾಳಜಿಯುಳ್ಳವರು, ಸಾಂಪ್ರದಾಯಿಕ ಅಡುಗೆಗಳಲ್ಲಿ ಅಭಿರುಚಿ ಹೊಂದಿರುವವರು ಎಲ್ಲರಿಗೂ ಈ ಪುಸ್ತಕವು ಒಂದು ಅನಿವಾರ್ಯ ಮಾರ್ಗದರ್ಶಿಯಾಗಿದೆ. ಆರೋಗ್ಯಕರ ಜೀವನದ ಕಡೆಗೆ ನಮ್ಮನ್ನು ಕರೆದೊಯ್ಯುವ, ಎಲ್ಲರ ಮನೆಗಳಲ್ಲೂ-ಮನಗಳಲ್ಲೂ ಇರಬೇಕಾದ ಒಂದು ದಾರಿದೀಪವಾಗಿದೆ.

**- ಮಿಥುನ್ ಎಂ.ವಿ.**
ಶಿಕ್ಷಕರು, ಕಾರ್ಕಳ-ಉಡುಪಿ ಜಿಲ್ಲೆ.

ಕೃತಿ: ಸಿರಿಧಾನ್ಯ: ಸಿರಿ-ಸರಿ
ಲೇಖಕರು: ಅನಂತ ಹುದೆಂಗಜೆ
ಪ್ರಕಾಶಕರು: ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್ (ರಿ), ಧರ್ಮಸ್ಥಳ
ಪುಟಗಳು: 164
ಬೆಲೆ: 200

## ಕವನ

# ಮಣ್ಣೆತ್ತಿನ ಅಮವಾಸ್ಯೆ



ಮಣ್ಣಿನ ಎತ್ತನು ಮಾಡೋಣ
ಮಣ್ಣೆತ್ತಿನ ಪೂಜೆಯ ಮಾಡೋಣ
ಬಂತು ಅಮವಾಸೆ ಮಣ್ಣೆತ್ತಿನ ಅಮವಾಸೆ

ನಿಸ್ವಾರ್ಥದಿ ಬಾಳಿನ ನೊಗಹತ್ತು
ನಮಗಾಗಿ ದುಡಿಯತಿಹವು ಎತ್ತು
ಹಿರಿಯರ ಪ್ರಾರ್ಥನೆ ಮಾಡೋಣ
ಸಮೃದ್ಧಿಯ ವರವನು ಪಡೆಯೋಣ
ದಾನ-ಧರ್ಮವ ಮಾಡೋಣ
ಎಲ್ಲೆಡೆ ಸುಖವನು ಪಡೆಯೋಣ

ರೈತನ ಎರಡೂ ಕಣ್ಣುಗಳೇ
ರೈತನ ಜೀವಾಳ ನೀವುಗಳೇ

**- ಮಂಜುನಾಥ ಸಜ್ಜನರ.**

# ಮಾದಕ ವಸ್ತು ಸೇವನೆಯಿಂದ ದೂರವಿರಿ

**■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಇತ್ತೀಚೆಗೆ ಮಾದಕ ವಸ್ತುಗಳ ಬಳಕೆ ಮಿತಿ ಮೀರುತ್ತಿರುವದರಿಂದ ಅಪರಾಧ ಪ್ರಕರಣಗಳು ಹೆಚ್ಚಾಗುತ್ತಿದ್ದು, ಇದನ್ನು ತಡೆಗಟ್ಟುವುದಕ್ಕಾಗಿ ಪೊಲೀಸ್ ಇಲಾಖೆ ಮಾದಕ ವಸ್ತುಗಳ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಕುರಿತು ಸಾರ್ವಜನಿಕ ವಲಯದಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ ಎಂದು ಶಿರಹಟ್ಟಿ ಪಿಎಸ್‌ಐ ಚನ್ನಯ್ಯ ದೇವೂರ ಹೇಳಿದರು.

ಅವರು ಮಂಗಳವಾರ ಶಿರಹಟ್ಟಿಯ ಪೊಲೀಸ್ ಠಾಣೆಯಿಂದ ಬೈಕ್ ರ್‍ಯಾಲಿ ಮೂಲಕ ಅಂತಾರಾಷ್ಟ್ರೀಯ ಮಾದಕ ವಸ್ತು ವಿರೋಧಿ ದಿನಾಚರಣೆ ಅಂಗವಾಗಿ ಪ್ರಮುಖ ವೃತ್ತಗಳಲ್ಲಿ ಸಂಚರಿಸಿ, ಸ್ಥಳೀಯ ಪ್ರಥಮದರ್ಜೆ ಕಾಲೇಜು, ಸರಕಾರಿ ಪದವಿಪೂರ್ವ ಕಾಲೇಜು, ಬಸ್ ನಿಲ್ದಾಣ, ಫಿಟ್ನೆಸ್ ಸೆಂಟರ್‌ಗಳಲ್ಲಿ ಹಮ್ಮಿಕೊಂಡಿದ್ದ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮಾದಕ ವಸ್ತುಗಳ ಸೇವನೆಯಿಂದ ಸಮಾಜದಲ್ಲಿ ಅನೇಕ ದುಷ್ಪರಿಣಾಮಗಳು ಎದುರಾಗುತ್ತಿವೆ. ಶಾಲಾ-ಕಾಲೇಜುಗಳಲ್ಲಿಯೂ ಸಹ ವಿದ್ಯಾರ್ಥಿಗಳು ಮಾದಕ ವಸ್ತು ಸೇವನೆಯಿಂದ ದೂರವಿರಬೇಕು. ಶಾಲಾ-ಕಾಲೇಜು ಹಂತವು ಭವಿಷ್ಯದ ಅಡಿಪಾಯವಾಗಿದ್ದು, ಈ ಸಂದರ್ಭದಲ್ಲಿ ವಿದ್ಯಾರ್ಥಿಗಳು ಓದಿನ ಕಡೆಗೆ ಹೆಚ್ಚು ಗಮನ ಹರಿಸಬೇಕು. ಒಮ್ಮೆ ಮಾದಕ ವಸ್ತು ಸೇವನೆ ಪ್ರಾರಂಭಿಸಿದರೆ ಅದರಿಂದ ಹೊರಬರಲು ಕಷ್ಟಸಾಧ್ಯವಾಗುವುದರ ಜೊತೆಗೆ ಆರೋಗ್ಯವೂ ಹಾಳಾಗುತ್ತದೆ. ಆದ್ದರಿಂದ ಸಾಮಾಜಿಕ ಪಿಡುಗಾಗಿರುವ ಮಾದಕ ವಸ್ತುಗಳನ್ನು ಪ್ರತಿಯೊಬ್ಬರೂ ವಿರೋಧಿಸಿ ಸಾಮಾಜಿಕ ಸ್ವಾಸ್ಥ್ಯ ಕಾಪಾಡಬೇಕೆಂದು ಹೇಳಿದರು.

ಮಾದಕ ವಸ್ತುಗಳ ಕಳ್ಳಸಾಗಣೆಯೂ ಅಪರಾಧವಾಗಿದ್ದು, ಈ ಬಗ್ಗೆ ಯಾರಿಗಾದರೂ ಮಾಹಿತಿ ಸಿಕ್ಕಲ್ಲಿ ಸಮೀಪದ ಪೊಲೀಸ್ ಠಾಣೆಗೆ ಮಾಹಿತಿ ನೀಡಬೇಕು. ವಿಶೇಷವಾಗಿ ಪಾಲಕರು ಸಹ ತಮ್ಮ ಮಕ್ಕಳ ದೈನಂದಿನ ಚಟುವಟಿಕೆಯ ಬಗ್ಗೆ ನಿಗಾ ವಹಿಸಬೇಕೆಂದು ಹೇಳಿದರು.



# ಯೋಗಾಭ್ಯಾಸ ಮನೋವಿಕಾಸಕ್ಕೆ ಮುನ್ನುಡಿ



**■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಯೋಗಾಭ್ಯಾಸ ಪ್ರತಿಯೊಬ್ಬ ಮನುಷ್ಯನ ನೆಮ್ಮದಿಗೆ ಪೂರಕವಾಗಿದ್ದು, ಮನೋವಿಕಾಸಕ್ಕೆ ಮುನ್ನುಡಿಯಾಗಿದೆ. ಇಡೀ ವಿಶ್ವಕ್ಕೆ ಯೋಗ ಮತ್ತು ಆಧ್ಯಾತ್ಮವನ್ನು ಪ್ರಸ್ತುತಪಡಿಸಿದ ಭಾರತ ನಿತ್ಯ ಪ್ರಕಾಶಿಸುವ ರಾಷ್ಟ್ರವಾಗಿದೆ ಎಂದು ಡಾ. ಆರ್.ಕೆ. ಗಚ್ಚಿನಮಠ ಹೇಳಿದರು.

ನರೇಗಲ್ಲ ಪಟ್ಟಣದ ಶ್ರೀ ಜಗದ್ಗುರು ಪಂಚಾರ್ಯ ಗ್ರಾಮೀಣಾಭಿವೃದ್ಧಿ ಶಿಕ್ಷಣ ಸಂಸ್ಥೆಯ ಶ್ರೀ ರೇಣುಕಾಚಾರ್ಯ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ನಡೆದ ವಿಶ್ವ ಯೋಗ ದಿನಾಚರಣೆಯಲ್ಲಿ ಅವರು ಮಾತನಾಡಿದರು.

ಮುಖ್ಯ ಶಿಕ್ಷಕಿ ನಿರ್ಮಲಾ ಹಿರೇಮಠ ಮಾತನಾಡಿದರು. ದೈಹಿಕ ಶಿಕ್ಷಕಿ ವಿ.ಬಿ. ಬಿಂಗಿ ಮಕ್ಕಳಿಗೆ ಯೋಗಾಸನ ತಿಳಿಸಿಕೊಟ್ಟರು. ಈ ಸಂದರ್ಭದಲ್ಲಿ ಸಂಸ್ಥೆ ಕಾರ್ಯದರ್ಶಿ ಈಶ್ವರ ಬೆಟಗೇರಿ, ಸಿಬ್ಬಂದಿಯವರಿದ್ದರು.

ಪಟ್ಟಣದ ಕೋಡಿಕೊಪ್ಪದ ಶಾಲೆಯಲ್ಲಿ ಯೋಗ ದಿನಾಚರಣೆಯನ್ನು ಆಚರಿಸಲಾಯಿತು. ಮುಖ್ಯ ಶಿಕ್ಷಕ ಸಂಗಯ್ಯ ಪ್ರಭುಸ್ವಾಮಿಮಠ ಮಾತನಾಡಿ, ಯೋಗದಿಂದ ರೋಗ ದೂರವಾಗುತ್ತದೆ. ಇದನ್ನು ನಿತ್ಯ ಜೀವನದಲ್ಲಿ ಅಳವಡಿಸಿಕೊಂಡರೆ ಜೀವನಪೂರ್ತಿ ಆರೋಗ್ಯವಂತರಾಗಿರಬಹುದು. ಯೋಗಕ್ಕೆ ಅಂತಾರಾಷ್ಟ್ರೀಯ ಮನ್ನಣೆ ತಂದುಕೊಟ್ಟ ನಮ್ಮ ಭಾರತದ ಪರಂಪರೆ ಬಹಳಷ್ಟು ದೊಡ್ಡದು ಎಂದರು. ಕಾರ್ಯಕ್ರಮದಲ್ಲಿ ಶಿಕ್ಷಕಿಯರಾದ ಎಲ್.ಎಸ್. ಶಿವಪ್ಪಗೌಡ್ರ, ಎಲ್.ಎಸ್. ಗಂಗಾಪೂರ, ಎನ್.ಎ. ಹುಬ್ಬಳಿಕರ, ಶಿಕ್ಷಕರಾದ ಜೆ.ಡಿ. ಶಾಲ್ದಾರ, ಬಿ.ಎಸ್. ಕರಮುಡಿ ಇದ್ದರು.

# 'IT 2.0' ತಂತ್ರಜ್ಞಾನ ಗ್ರಾಹಕ, ನೌಕರರ ಸ್ನೇಹಿ




**■ ವಿಜಯಸಾಕ್ಷಿ ಸುದ್ದಿ, ಗದಗ**

ಅಂಚೆ ಇಲಾಖೆಯಲ್ಲಿ 'IT 2.0' ತಂತ್ರಜ್ಞಾನ ಆರಂಭದಿಂದಾಗಿ ತ್ವರಿತ ಮತ್ತು ಉತ್ತಮ ಸೇವೆ ದೊರೆಯಲಿದೆ ಎಂದು ಗದಗ ವಿಭಾಗೀಯ ಅಂಚೆ ಅಧೀಕ್ಷಕ ರಮೇಶ ಮಡಿವಾಳರ ಹೇಳಿದರು.

ಭಾರತೀಯ ಅಂಚೆ ಇಲಾಖೆಯ ಪ್ರಧಾನ ಅಂಚೆ ಕಚೇರಿಯಲ್ಲಿ ಸೋಮವಾರ 'IT 2.0' ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಅಂಚೆ ಇಲಾಖೆಯ ಕಾರ್ಯಚಟುವಟಿಕೆಗಳಿಗೆ ಅಗತ್ಯವಾದ ತಂತ್ರಾಂಶಗಳನ್ನು ನುರಿತ ಅಂಚೆ ತಂತ್ರಜ್ಞರಿಂದ ತಯಾರಿಸಿದೆ. ಇದರಿಂದಾಗಿ ಹೆಚ್ಚು ಸರಳೀಕರಣಗೊಳಿಸಿದ ತಂತ್ರಜ್ಞಾನ ಅಂಚೆ ಇಲಾಖೆಗೆ ಲಭಿಸಿದೆ ಎಂದರು.

ರಾಜ್ಯದಲ್ಲಿ ಪ್ರಾಯೋಗಿಕವಾಗಿ 'IT 2.0' ಜಾರಿಗೆ ತಂದಿದೆ. ಈಗಾಗಲೇ ಅಂಚೆ ಇಲಾಖೆ ಹಲವು ದಶಕಗಳಿಂದ ಜನರ ಮನೆ ಬಾಗಿಲಿಗೆ ವಿಶ್ವಾಸಾರ್ಹ ಸೇವೆ ನೀಡುತ್ತಿದೆ. ಈ ಸಾಲಿಗೆ ಈಗ ನವೀಕರಣದೊಂದಿಗೆ ಗ್ರಾಹಕ ಮತ್ತು ಅಂಚೆ ನೌಕರರ ಸ್ನೇಹಿಯಾಗಿ ರೂಪಾಂತರಗೊಳಲಿದೆ ಎಂದರು.

ಗದಗ ಉಪ ವಿಭಾಗ ಸಹಾಯಕ ಅಂಚೆ ಅಧೀಕ್ಷಕ ಶ್ರೀಕಾಂತ ಜಾದವ ಹಾಗೂ ಉಪ ಅಂಚೆ ಪಾಲಕ ದೊಡ್ಡಪ್ಪ ಇಟಗಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಪ್ರಧಾನ ಅಂಚೆ ಪಾಲಕರಾದ ಮಂಜುಳಾ ದೇಗಿನಾಳ ಅಧ್ಯಕ್ಷತೆ ವಹಿಸಿದ್ದರು. ವಿಭಾಗೀಯ ಸಹಾಯಕಅಂಚೆ ಅಧೀಕ್ಷಕ ವಿ.ಸುನೀಲಕುಮಾರ, ಡಿ.ಜಿ. ಮ್ಯಾಗೇರಿ, ಶರಣಪ್ಪ ನಾಯ್ಕರ, ವೆಂಕಟೇಶ ಆಕಳವಾಡಿ, ವೀರಣ್ಣ ಅಂಗಡಿ, ಎಸ್.ವಿ. ಹಿರೇಮಠ, ಸಿದ್ಧಲಿಂಗೇಶ ಯಂಡಿಗೇರಿ, ವೈ.ಎಸ್. ಗುಗ್ಗರಿ, ಮನೋಹರ ಕಡಿಯವರ, ಉಮೇಶ ಸಂದಿಮನಿ, ಮಹಾಂತೇಶ ಗದಗ, ರವಿ ಜಾಧವ, ವಾಣಿ ಮಾಂಡ್ರೆ, ಸರೋಜ ಪಟ್ಟಶೆಟ್ಟಿ, ನೀಲಮ್ಮ ದಿಬ್ಬದಮನಿ, ವಿದ್ಯಾ ಗದಗ, ಶಿವರಾಜ ಕ್ಷತ್ರಿಯವರ ಮತ್ತಿತರರು ಪಾಲ್ಗೊಂಡಿದ್ದರು.

ಸಮಾಜಮುಖಿ ಅಭಿನಂದನಾ ಗ್ರಂಥ ಬಿಡುಗಡೆ ಸಮಾರಂಭದಲ್ಲಿ ಶಾಸಕ ಜಿ.ಎಸ್. ಪಾಟೀಲ ಅಭಿಮತ

# ವೈದ್ಯ ವೃತ್ತಿ ಅತ್ಯಂತ ಪವಿತ್ರ



ಗ್ರಾಮೀಣ ಭಾಗಗಳಲ್ಲಿ ವೈದ್ಯರು ಸೇವೆ ಸಲ್ಲಿಸುವುದು ಅತ್ಯಂತ ವಿರಳ. ಆದರೆ ಡಾ. ಕೆ.ಬಿ. ಧನ್ನೂರರು ಕಳೆದ 50 ವರ್ಷಗಳಿಂದ ನರೆಗಲ್ಲ ಗ್ರಾಮದಲ್ಲಿ ತಮ್ಮ ವೈದ್ಯ ವೃತ್ತಿಯ ಸೇವೆ ಮಾಡುತ್ತ ಆ ಭಾಗದ ಜನರಿಗೆ ಚಿರಪರಿಚಿತರು. ದಿನದ 24 ಗಂಟೆಗಳ ಕಾಲ ಯಾವುದೇ ಸಮಯ ಹಾಗೂ ಸಂದರ್ಭಗಳಲ್ಲಿಯೂ ಆಸ್ಪತ್ರೆಗೆ ತೆರಳಿದರೆ ಸಾಕು, ಅಲ್ಲಿ ಗುಣಮಟ್ಟದ ಚಿಕಿತ್ಸೆ ಸಿಗುತ್ತದೆ ಎಂಬ ಭರವಸೆಯನ್ನು ಜನರು ಹೊಂದಿದ್ದರು. ಹೀಗಾಗಿ ಅವರ ಬಗ್ಗೆ ಜನರಲ್ಲಿ ವಿಶ್ವಾಸ ಮೂಡಿಸಿದೆ ಎಂದು ಶಾಸಕ ಜಿ.ಎಸ್. ಪಾಟೀಲ ಅಭಿಪ್ರಾಯಪಟ್ಟರು.

**■ ವಿಜಯಸಾಕ್ಷಿ ಸುದ್ದಿ, ರೋಣ**

ವೈದ್ಯ ವೃತ್ತಿ ಅತ್ಯಂತ ಪವಿತ್ರ ಎನ್ನುವುದನ್ನು ಸಾಬೀತು ಮಾಡಿದ್ದು ಡಾ. ಕೆ.ಬಿ. ಧನ್ನೂರ ಎನ್ನುವುದರಲ್ಲಿ ಸಂದೇಹವಿಲ್ಲ ಎಂದು ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ರವಿವಾರ ಆರ್‌ಜಿಎಸ್ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಹಮ್ಮಿಕೊಂಡಿದ್ದ ಡಾ. ಕೆ.ಬಿ. ಧನ್ನೂರರ 'ಸಮಾಜಮುಖಿ' ಅಭಿನಂದನಾ ಗ್ರಂಥ ಬಿಡುಗಡೆ ಮತ್ತು ಅಮೃತ ಮಹೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಓರ್ವ ಮನುಷ್ಯ ಸಮಾಜದಲ್ಲಿ ಹಣ ಗಳಿಸುವುದು ಸುಲಭ. ಆದರೆ ಹೆಸರು ಗಳಿಸುವುದು ಕಷ್ಟದ ಕೆಲಸ. ಇದಕ್ಕೆ ಅಪವಾದ ಎನ್ನುವಂತೆ ಡಾ. ಕೆ.ಬಿ. ಧನ್ನೂರರು ನನಗೆ ಹಣ ಮುಖ್ಯವಲ್ಲ, ಬದಲಾಗಿ ನನ್ನ ಬಳಿ ಬಂದ ರೋಗಿ ಗುಣಮುಖರಾದರೆ ಸಾಕು ಎನ್ನುತ್ತಾ ಸಮಾಜ ಸೇವೆಗೈದರು. ಇಂದು ಅವರ ಮಗನೂ ಸಹ ಪ್ರಸಿದ್ಧ ವೈದ್ಯನಾಗಿ ಬಡವರ ಸೇವೆಯನ್ನು ಮಾಡುತ್ತಾ ಸಾಗಿದ್ದಾರೆ ಎಂದರು.

ಅಧ್ಯಕ್ಷತೆಯನ್ನು ಮಾಜಿ ಸಂಸದ ಆರ್.ಎಸ್. ಪಾಟೀಲ ವಹಿಸಿದ್ದರು.

ಮುಪ್ಪಿನ ಬಸವಲಿಂಗ ಶ್ರೀಗಳು, ಗುರುಪಾದ ಶ್ರೀಗಳು, ಮಲ್ಲಿಕಾರ್ಜುನ ಶಿವಾಚಾರ್ಯ ಶ್ರೀಗಳು, ಅಭಿನವ ಚನ್ನಬಸವ ಶ್ರೀಗಳು ಅಭಿನಂದನಾ ಗ್ರಂಥವನ್ನು ಲೋಕಾರ್ಪಣೆಗೊಳಿಸಿದರು. ಎಂ.ಎಸ್. ಧಡೆಸೂರಮಠರು ಡಾ. ಕೆ.ಬಿ. ಧನ್ನೂರ ನಡೆದು ಬಂದ ಹಾದಿ ಕುರಿತು ಉಪನ್ಯಾಸ ನೀಡಿದರು. ಡಾ. ಕೆ.ಬಿ. ಧನ್ನೂರ ದಂಪತಿಗಳನ್ನು ಅವರ ಅಭಿಮಾನಿಗಳು ಹಾಗೂ ಸಾರ್ವಜನಿಕರು ಸನ್ಮಾನಿಸಿದರು.

ಮಾಜಿ ಶಾಸಕ ಡಿ.ಆರ್. ಪಾಟೀಲ, ಐ.ಎಸ್. ಪಾಟೀಲ, ವಿ.ಆರ್. ಗುಡಿಸಾಗರ, ವೀರಣ್ಣ ಶೆಟ್ಟರ, ಬಸವರಾಜ ನವಲಗುಂದ, ಪ್ರಭು ಮೇಟಿ, ಯೂಸುಪ್ ಇಟಗಿ, ಪರಶುರಾಮ ಅಳಗವಾಡಿ, ವಿ.ಬಿ. ಸೋಮನಕಟ್ಟಿಮಠ ಸೇರಿದಂತೆ ಮುಖಂಡರು ಉಪಸ್ಥಿತರಿದ್ದರು.

# ಸರ್ಕಾರಿ ಶಾಲೆಗಳಿಂದ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನಲ್ಲಿ ನಮ್ಮೂರ ಶಾಲೆಗೆ ನಮ್ಮ ಯುವ ಜನರು ಯೋಜನೆಯಡಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಮಾನ್ಯತೆ ಪಡೆದಿರುವ ಕ್ರೀಡಾ ಸಂಸ್ಥೆಗಳು ಆಯೋಜಿಸುವ ತಾಲೂಕು, ಜಿಲ್ಲೆ, ರಾಜ್ಯ ಮತ್ತು ರಾಷ್ಟ್ರ ಮಟ್ಟದ ಕ್ರೀಡಾಕೂಟಗಳಲ್ಲಿ ಉತ್ತಮ ಸಾಧನೆ ತೋರಿರುವ ಕ್ರೀಡಾಪಟುಗಳನ್ನು ಹೊಂದಿರುವ ಸರ್ಕಾರಿ ಶಾಲೆಗಳನ್ನು ಗುರುತಿಸಿ ಆಯ್ಕೆಯಾದ ಪ್ರತಿ ಶಾಲೆಗೆ ಪ್ರೋತ್ಸಾಹವಾಗಿ ತಲಾ ರೂ.1.00 ಲಕ್ಷದಂತೆ ಸರ್ಕಾರದಿಂದ ಪ್ರೋತ್ಸಾಹಧನವನ್ನು ನೀಡಲು ತೀರ್ಮಾನಿಸಿದೆ.

ಸದರಿ ಅನುದಾನದಲ್ಲಿ ರೂ.10000/-ಗಳನ್ನು ಆಯ್ಕೆಯಾದ ಶಾಲೆಯ ದೈಹಿಕ ಶಿಕ್ಷಕರಿಗೆ ಮತ್ತು ರೂ.90000/- ಗಳನ್ನು ಶಾಲೆಯ ಎಸ್.ಡಿ.ಎಂ.ಸಿ. ಗೆ ಅಗತ್ಯ ಕ್ರೀಡಾ ಸಾಮಗ್ರಿಗಳನ್ನು ಖರೀದಿ ಮಾಡಲು ಉಲ್ಲೇಖಿತ ಪತ್ರದನ್ವಯ ಸೂಚಿಸಲಾಗಿರುತ್ತದೆ. ಈ ಹಿನ್ನಲೆಯಲ್ಲಿ 2024-25ನೇ ಸಾಲಿನ ಕ್ರೀಡೆಯಲ್ಲಿ ಉತ್ತಮ ಸಾಧನೆ ತೋರಿರುವ ಹೆಚ್ಚಿನ ಸಂಖ್ಯೆಯ ಕ್ರೀಡಾಪಟುಗಳನ್ನು ಹೊಂದಿದ ಸರ್ಕಾರಿ ಶಾಲೆಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತ ಸರ್ಕಾರಿ ಶಾಲೆಗಳು ದಿ:25-06-2025 ರೊಳಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ, ಗದಗ ಇಲ್ಲಿ ಲಿಖಿತವಾಗಿ ಅರ್ಜಿ ಸಲ್ಲಿಸಲು ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಗದಗ ದೂರವಾಣಿ ಸಂಖ್ಯೆ 08372-238345 ಗೆ ಸಂಪರ್ಕಿಸಲು ಕೋರಲಾಗಿದೆ.

### ಮುಮ್ಮಿಗಟ್ಟಿ, ಗರಗ, ತಡಕೋಡ ಶಾಲೆ, ಅಂಗನವಾಡಿ ಕೇಂದ್ರಗಳಿಗೆ ಸಿಇಓ ಭುವನೇಶ ಪಾಟೀಲ ಭೇಟಿ

# ಕಾರ್ಯನಿರ್ವಹಣೆಯ ಕುರಿತು ಪರಿಶೀಲನೆ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ಜಿಲ್ಲಾ ಪಂಚಾಯಿತಿ ಸಿಇಓ ಭುವನೇಶ ಪಾಟೀಲ ಅವರು ಸೋಮವಾರ ಮಧ್ಯಾಹ್ನದಿಂದ ಸಂಜೆಯವರೆಗೆ ಧಾರವಾಡ ತಾಲೂಕಿನ ವಿವಿಧ ಗ್ರಾಮಗಳಲ್ಲಿನ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ಭೇಟಿ ನೀಡಿ, ಕಾರ್ಯನಿರ್ವಹಣೆಯ ಕುರಿತು ಪರಿಶೀಲಿಸಿದರು.

ಧಾರವಾಡ ತಾಲೂಕಿನ ಮುಮ್ಮಿಗಟ್ಟಿ ಗ್ರಾಮದಲ್ಲಿ ನಿರ್ಮಾಣ ಹಂತದಲ್ಲಿರುವ ಸರ್ಕಾರಿ ಪ್ರೌಢಶಾಲೆಯ ನೂತನ ಕಟ್ಟಡದ ಕಾಮಗಾರಿಯನ್ನು ಪರಿಶೀಲಿಸಿ, ಮಂಜೂರಾತಿ ನೀಡಿದ ನೀಲನಕ್ಷೆಯ ಪ್ರಕಾರ ಹಾಗೂ ಬಿಡುಗಡೆಯಾದ ಅನುದಾನಕ್ಕೆ ಅನುಗುಣವಾಗಿ ಪ್ರಗತಿ ಸಾಧಿಸಿರುವ ಕುರಿತು ಮಾಹಿತಿ ಪಡೆದುಕೊಂಡರು.

ನಂತರ ಅವರು ಗ್ರಾಮದ



ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿ, ಮಕ್ಕಳ ಹಾಜರಾತಿ, ಆಹಾರ ದಾಖಲೆಗಳ ಪರಿಶೀಲನೆ ಮಾಡಿದರು. ಮಕ್ಕಳಿಗೆ ನೀಡುವ ಆಹಾರ ಸಾಮಗ್ರಿಗಳನ್ನು ಪರೀಕ್ಷಿಸಿದರು. ಅಂಗನವಾಡಿಯನ್ನು ಸ್ವಚ್ಛವಾಗಿ ಇಟ್ಟುಕೊಳ್ಳಬೇಕು ಹಾಗೂ ಆಹಾರ ಸಾಮಗ್ರಿಗಳನ್ನು ಪರೀಕ್ಷಿಸಿ, ಯಾವುದೇ ಹುಳು, ಕಸ-ಕಡ್ಡಿ ಇರದಂತೆ ನೋಡಿ ಮಕ್ಕಳಿಗೆ ನೀಡಬೇಕು. ಅಂಗನವಾಡಿ ಕೇಂದ್ರಗಳಲ್ಲಿ ಸುರಕ್ಷತೆಯ ಕ್ರಮಗಳನ್ನು ಕಟ್ಟು ನಿಟ್ಟಾಗಿ ಪಾಲನೆ ಮಾಡಬೇಕು ಎಂದು ಅಂಗನವಾಡಿ ಕಾರ್ಯಕರ್ತೆಯರಿಗೆ ಎಚ್ಚರಿಕೆ ನೀಡಿದರು.

ನಂತರ ಅವರು ತಡಕೋಡ ಗ್ರಾಮದ ಸರ್ಕಾರಿ ಕನ್ನಡ ಹೆಣ್ಣು ಮಕ್ಕಳ ಶಾಲೆಗೆ ಭೇಟಿ ನೀಡಿ, ಕೋಲ್ ಇಂಡಿಯಾ ಕಂಪನಿಯ ಸಿಎಸ್‌ಆರ್ ನಿಧಿಯಲ್ಲಿ ನಿರ್ಮಾಣವಾಗುತ್ತಿರುವ ಎರಡು ಶಾಲಾ ಕೊಠಡಿಗಳನ್ನು ವೀಕ್ಷಿಸಿದರು. ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯ ಆವರಣದಲ್ಲಿ ಅರಣ್ಯ ಇಲಾಖೆಯಿಂದ ನಿರ್ಮಿಸಿರುವ ರಾಶಿ ವನ ವೀಕ್ಷಿಸಿ ಸಂತಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಎಸ್. ಕೆಳದಿಮಠ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಡಾ. ಎಚ್.ಎಚ್. ಕುಕನೂರ, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಗಂಗಾಧರ ಕಂದಕೂರ, ಕ್ಷೇತ್ರ ಶಿಕ್ಷಣಾಧಿಕಾರಿ ರಾಮಕೃಷ್ಣ ಸದಲಗಿ, ಉಪನಿರ್ದೇಶಕರ ಕಾರ್ಯಾಲಯದ ಶಿಕ್ಷಣಾಧಿಕಾರಿ ಪ್ರಭಯ್ಯ ಕೆ. ಚಿಕ್ಕಮಠ, ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಹಾಗೂ ಶಾಲಾ ಮುಖ್ಯೋಪಾಧ್ಯಾಯರು, ಎಸ್‌ಡಿಎಂಸಿ ಸದಸ್ಯರು, ಗ್ರಾಮಸ್ಥರು ಉಪಸ್ಥಿತರಿದ್ದರು.

> ಮುಮ್ಮಿಗಟ್ಟಿ ಗ್ರಾಮ ಪಂಚಾಯಿತಿ ಕಚೇರಿಗೆ ಭೇಟಿ ನೀಡಿದ ಸಿಇಓ ಭುವನೇಶ ಪಾಟೀಲ, ಕಚೇರಿಯಲ್ಲಿನ ಕಡತಗಳ ನಿರ್ವಹಣೆ ಹಾಗೂ ಕಚೇರಿ ಸ್ವಚ್ಛತೆ, ಮೂಲ ಸೌಲಭ್ಯಗಳನ್ನು ಪರಿಶೀಲಿಸಿದರು. ಗರಗ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ, ವೈದ್ಯರ ಹಾಜರಾತಿ ಪರಿಶೀಲಿಸಿದರು. ರೋಗಿಗಳು, ಅವರ ಸಂಬಂಧಿಕರಿಂದ ಆಸ್ಪತ್ರೆಯ ಸೌಲಭ್ಯಗಳು, ಸಿಬ್ಬಂದಿಗಳ ಸ್ಪಂದನೆ ಕುರಿತು ಮಾಹಿತಿ ಪಡೆದರು.

# ಕಪ್ಪತಗುಡ್ಡ ವನ್ಯಜೀವಿ ಧಾಮ 'ಪರಿಸರ ಸೂಕ್ಷ್ಮ ವಲಯ'

▶▶ ಮೊದಲನೇ ಪುಟದಿಂದ

> **ನಿರ್ಬಂಧಿತ ಚಟುವಟಿಕೆಗಳು**
>
> ಈಗಿರುವ ಹಾಗೂ ಹೊಸ ವಾಣಿಜ್ಯ ಗಣಿಗಾರಿಕೆ, ಕಲ್ಲು ಗಣಿಗಾರಿಕೆ, ಕಲ್ಲುಪುಡಿ ಮಾಡುವ ಘಟಕಗಳನ್ನು ಸಂಪೂರ್ಣ ನಿಷೇಧಿಸಲಾಗಿದೆ. ಮಾಲಿನ್ಯಕ್ಕೆ ಕಾರಣವಾಗುವ ಕೈಗಾರಿಕೆಗಳ ಸ್ಥಾಪನೆಗೆ ನಿರ್ಬಂಧ, ಯಾವುದೇ ಹೊಸ ಉಷ್ಣ ವಿದ್ಯುತ್ ಯೋಜನೆಗಳನ್ನು ಕೈಗೆತ್ತಿಕೊಳ್ಳುವಂತಿಲ್ಲ. ಯಾವುದೇ ಅಪಾಯಕಾರಿ ವಸ್ತು ಬಳಕೆ, ಉತ್ಪಾದನೆ ಅಥವಾ ಸಂಸ್ಕರಣೆಗೆ ನಿರ್ಬಂದ, ನೈಸರ್ಗಿಕ ಜಲಮೂಲಗಳ ಅಥವಾ ಸಂಸ್ಕರಿಸದ ತ್ಯಾಜ್ಯಗಳ ವಿಸರ್ಜನೆಗೆ ನಿಷೇಧ, ಹೊಸದಾಗಿ ಘನತ್ಯಾಜ್ಯ ವಿಲೇವಾರಿ ಘಟಕ ಮತ್ತು ಜೈವಿಕ, ವೈದ್ಯಕೀಯ ತ್ಯಾಜ್ಯ ಸುಡುವ ಘಟಕಕ್ಕೆ ಅವಕಾಶವಿರುವುದಿಲ್ಲ. ಈಗಿರುವ ಹಾಗೂ ಹೊಸದಾಗಿ ಇಟ್ಟಿಗೆ ಗೂಡುಗಳ ಘಟಕ ಸ್ಥಾಪನೆಗೆ ನಿಷೇಧ, ಮರದ ಮಿಲ್‌ಗಳಿಗೆ ನಿರ್ಬಂದ, ದೊಡ್ಡ ಪ್ರಮಾಣದಲ್ಲಿ ಜಾನುವಾರು ಹಾಗೂ ಕೋಳಿ ಫಾರಂಗಳಿಗೆ ಅವಕಾಶವಿಲ್ಲ, ಮರ ಆಧಾರಿತ ಕೈಗಾರಿಕೆಗಳನ್ನು ಆರಂಭಿಸುವಂತಿಲ್ಲ, ಪರಿಸರ ಸೂಕ್ಷ್ಮ ಪ್ರದೇಶದ 1 ಕಿ.ಮೀ ವ್ಯಾಪ್ತಿಯೊಳಗೆ ಹೋಟೆಲ್‌ಗಳು ಹಾಗೂ ರೆಸಾರ್ಟ್‌ಗಳನ್ನು ತೆರೆಯುವಂತಿಲ್ಲ.

ಪರಿಸರ ಸೂಕ್ಷ್ಮ ಪ್ರದೇಶವನ್ನು ಕನಿಷ್ಠ 4.30 ಕಿ.ಮೀವರೆಗೆ ಗುರುತಿಸಲಾಗಿದೆ ಎಂದರು.

ಕಪ್ಪತ್ತಗುಡ್ಡ ವನ್ಯಜೀವಿಧಾಮದ ಗಡಿಯಿಂದ ಪರಿಸರ ಸೂಕ್ಷ್ಮ ವಲಯದ ವ್ಯಾಪ್ತಿ ಕಂದಾಯ ಭೂಮಿ ಇರುವ ಕಡೆಗಳಲ್ಲಿ ಕನಿಷ್ಠ 1 ಕಿಮೀ ಅಂತರ ಇರುತ್ತದೆ ಮತ್ತು ಕಾಯ್ದಿಟ್ಟ ಅರಣ್ಯ ಪ್ರದೇಶ ಇರುವ ಕಡೆಗಳಲ್ಲಿ ಗರಿಷ್ಠ 4.30 ಕಿ.ಮೀ ಅಂತರ ಇರುತ್ತದೆ. ಕಪ್ಪತ್ತಗುಡ್ಡ ವನ್ಯಜೀವಿಧಾಮದ ಪರಿಸರ ಸೂಕ್ಷ್ಮ ವಲಯದ ಒಟ್ಟು ವಿಸ್ತೀರ್ಣ 322.695 ಚ.ಕಿ.ಮೀ ಇರುತ್ತದೆ ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಮಾಜಿ ಶಾಸಕ ಡಿ.ಆರ್. ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕಾಧ್ಯಕ್ಷ ಅಶೋಕ ಮಂದಾಲಿ, ಸಿದ್ದು ಪಾಟೀಲ, ಫಾರೂಕ್ ಹುಬ್ಬಳ್ಳಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷ ಕುಮಾರ್ ಹಾಜರಿದ್ದರು.

### ತೋಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯದಲ್ಲಿ 'ತೋಂಟದೋತ್ಸವ-20025'

# ಕಲಿಕೆ ತಪಸ್ಸಿನಷ್ಟೇ ಕಷ್ಟ

■ ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿ ಜೀವನವೊಂದು ತಪಸ್ಸಿನಂತೆ. ಶಿಕ್ಷಣ ಅಥವಾ ಕಲಿಕೆ ತಪಸ್ಸಿನಷ್ಟೇ ಕಷ್ಟ. ಅದನ್ನು ಸಮಯೋಚಿತವಾಗಿ ಪಡೆದುಕೊಂಡಲ್ಲಿ ವಿದ್ಯಾರ್ಥಿಗಳ ಮುಂದಿನ ಬದುಕು ಉತ್ತರೋತ್ತರವಾಗಿ ಅಭಿವೃದ್ಧಿಯಾಗುತ್ತದೆ. ತೋಂಟದ ಡಾ. ಸಿದ್ಧಲಿಂಗ ಮಹಾಸ್ವಾಮಿಗಳು ಶ್ರಮವಹಿಸಿ ಈ ಭಾಗದಲ್ಲಿ ಇಂಜಿನೀಯರಿಂಗ್ ಮಹಾವಿದ್ಯಾಲಯ ನಿರ್ಮಿಸಿದ್ದು, ಈ ಭಾಗದ ವಿದ್ಯಾರ್ಥಿಗಳು ಅದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಬೈರನಹಟ್ಟಿಯ ದೊರೆಸ್ವಾಮಿ ವಿರಕ್ತಮಠದ ಶ್ರೀ ಶಾಂತವೀರ ಮಹಾಸ್ವಾಮಿಗಳು ನುಡಿದರು. ತೋಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯದ ವಾರ್ಷಿಕ ಸ್ನೇಹ ಸಮ್ಮೇಳನ




'ತೋಂಟದೋತ್ಸವ-2025' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಾಯದರ್ಶಿ ಪ್ರೊ. ಎಸ್. ಎಸ್. ಪಟ್ಟಣಶೆಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಅಧ್ಯಕ್ಷತೆಯನ್ನು ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ಎಂ.ಎಂ. ಅವಟಿ ವಹಿಸಿಕೊಂಡಿದ್ದರು. ಸ್ನೇಹಸಮ್ಮೇಳನದ ಸಂಚಾಲಕರಾದ ಪ್ರೊ. ವಿಜಯಕುಮಾರ ಎಸ್. ಎಮ್ ಮತ್ತು ಡಾ. ರಮೇಶ ಬಡಿಗೇರ ಉಪಸ್ಥಿತರಿದ್ದರು.

ಪಿಎಚ್‌ಡಿ ಪಡೆದುಕೊಂಡ ಮಹಾವಿದ್ಯಾಲಯದ ಸಿಬ್ಬಂದಿಗಳಾದ ಡಾ. ಎಸ್.ಎಸ್. ಖಾಜಿ, ಡಾ. ಮಲ್ಲಿಕಾರ್ಜುನ ಜಿ.ಡಿ, ಡಾ. ಎಮ್.ಆರ್. ಅಳವಂಡಿ, ಡಾ. ಪ್ರಕಾಶ ಮರಕುಂಬಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಪ್ರೊ. ಪ್ರಸನ್ನ ನಾಡಗೌಡರ ಮತ್ತು ಪ್ರೊ. ಮಹಾಂತ ಕಟ್ಟಿಮನಿಯವರು ತಾಂತ್ರಿಕ ಸಂಚಾಲಕರೆಂದು ಆಯ್ಕೆಯಾದ ಹಿನ್ನೆಲೆಯಲ್ಲಿ ಸನ್ಮಾನಿಸಲಾಯಿತು.

ವಿಶೇಷ ಕಾರ್ಯಕ್ರಮವೊಂದರಲ್ಲಿ ಮಹಾವಿದ್ಯಾಲಯದ ಎಲ್ಲ ವಿದ್ಯಾರ್ಥಿಗಳ ತಾಯಂದಿರನ್ನು ಸನ್ಮಾನಿಸುವ ಕಾರ್ಯಕ್ರಮದ ನಿಮಿತ್ತ ಸಾಂಕೇತಿಕವಾಗಿ ಸುಜಾತ ಅಶೋಕ ಬೆಟಗೇರಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಈ ಕಾರ್ಯಕ್ರಮವನ್ನು ಡಾ. ರಾಜೇಂದ್ರ ಖಡಿ ಮತ್ತು ಡಾ. ರಶ್ಮಿ ಅಂಗಡಿ ನಡೆಸಿಕೊಟ್ಟರು.

ನಯನಾ ಅಳವಂಡಿ ಮತ್ತು ಮೇಳಯಂಕಿ ತಮ್ಮ ಪ್ರತಿಭೆಯನ್ನು ಅನಾವರಣ ಮಾಡಿದರು. ವಿದ್ಯಾರ್ಥಿಗಳಾದ ಮಾನ್ಯ ಶೆಟ್ಟಿ, ವರ್ಷಾ ಮಹೇಂದ್ರಕರ ನಿರೂಪಿಸಿದರು. ಸೋನಿಯಾ ಹುಬ್ಬಳ್ಳಿ ಸ್ವಾಗತ ಗೀತೆ ಹಾಡಿದರು. ಫಜಲ್, ಶ್ರೇಯಸ್ ಪಳಿನಿ, ರಾಘವೇಂದ್ರ, ಸಂಜನಾ, ನೀಲಗಂಗಾ, ದಾನೇಶ್ವರಿ ನಿರೂಪಿಸಿದರು.

# ಸಂಗಮೇಶ ಹಾದಿಮನಿ ನಾಮಪತ್ರ ಸಲ್ಲಿಕೆ



■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಗಂಗಾಮತಸ್ಥರ ಸಂಘದ ಚುನಾವಣೆ ಎಲ್ಲಾ ಜಿಲ್ಲೆಗಳಲ್ಲಿ ಜುಲೈ 6ರಂದು ಘೋಷಣೆಯಾಗಿದ್ದು, ಗದಗ ಜಿಲ್ಲೆಯ ಎಲ್ಲಾ ತಾಲೂಕುಗಳಿಂದ ಪ್ರತಿನಿಧಿಗಳ ಆಯ್ಕೆಗೆ ಚುನಾವಣೆ ಜರುಗಲಿದೆ. ಗದಗ ತಾಲೂಕಿನಿಂದ ಸಾಮಾಜಿಕ ಚಿಂತಕ ಸಂಗಮೇಶ ಹಾದಿಮನಿ ನಾಮಪತ್ರ ಸಲ್ಲಿಸಿದರು. ಈ ಸಂದರ್ಭದಲ್ಲಿ ಸಮಾಜ ಸಂಘಟನೆಯ ಜಿಲ್ಲಾಧ್ಯಕ್ಷ ರಾಮಣ್ಣ ಇರಕಲ್ಲ ಮಾತನಾಡಿ, ಸಮಾಜದ ಅಭಿವೃದ್ಧಿಗೆ ಯುವಕರು ಮುಂದಾಗಬೇಕಿದೆ. ಸಂಗಮೇಶ ಹಾದಿ ಮನಿಯವರು ಚುನಾವಣೆಗೆ ನಾಮಪತ್ರ ಸಲ್ಲಿಸಿದ್ದು ಅಭಿವೃದ್ಧಿಯ ಬೆಳವಣಿಗೆಯ ಪೂರಕವಾಗಿದೆ ಎಂದರು. ಗುರಪ್ಪ ತಿರ್ಲಾಪೂರ, ಅಮಿತ ಪೂಜಾರ, ಹರೀಶ ಬಾರಕೇರ, ಬಸವರಾಜ ಗುಡಿಸಾಗರ, ಮಧುಶೇಖರ ಪೂಜಾರ, ಹೇಮಂತ ದಳವಾಯಿ, ಮಂಜುನಾಥ ಗುಡಿಸಾಗರ, ಸುಜಾತ ಗುಡಿಸಾಗರ, ಸೌಮ್ಯ ಸುಣಗಾರ, ಕವಿತಾ ಗುಡಿಸಾಗರ, ರಾಜು ಪೂಜಾರ, ಶಂಕರಗೌಡ ರಾಹುತ್, ನಾಗರಾಜ ಸೇರಿದಂತೆ ಸಮಾಜ ಬಾಂಧವರು ಉಪಸ್ಥಿತರಿದ್ದರು.

# ಅಂಗಾಂಗ ದಾನದಿಂದ ಸಾವಿನಲ್ಲೂ ಸಾರ್ಥಕತೆ

▶▶ ಮೊದಲನೇ ಪುಟದಿಂದ

ಜಗತ್ತಿನಲ್ಲಿ ಅಂಗಾಂಗಗಳ ದಾನ ಮಾಡುವ ಬಗ್ಗೆ ಪ್ರೇರಣೆಯಾಗುವ ಕೆಲಸ ನಡೆದಿದೆ. ಆದರೆ, ಭಾರತದಲ್ಲಿ ಅಂಗಾಗಗಳ ದಾನ ಮಾಡುವ ಪದ್ಧತಿಯಲ್ಲಿ ಬಹಳಷ್ಟು ವಿಳಂಬವಾಗಿದ್ದು, ಇತ್ತೀಚಿನ ದಿನಗಳಲ್ಲಿ ಸ್ವಲ್ಪ ಮಟ್ಟಿಗೆ ಪ್ರೇರಣೆ, ಪ್ರೋತ್ಸಾಹದಿಂದ ಚಾಲನೆ ಸಿಕ್ಕಂತಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಮಾಜಿ ಶಾಸಕ ಡಿ.ಆರ್. ಪಾಟೀಲ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕಾ ಅಧ್ಯಕ್ಷ ಅಶೋಕ ಮಂದಾಲಿ, ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ, ಡಾ. ಎಸ್.ಆರ್. ನಾಗನೂರ, ಡಾ. ಪ್ಯಾರಅಲಿ ನೂರಾನಿ, ಡಾ. ಅವಿನಾಶ ಓದುಗೌಡರ ಮುಂತಾದವರಿದ್ದರು.

# ಮಾದಕ ವಸ್ತುಗಳ ಮೋಹಕ್ಕೆ ಸಿಲುಕದಿರಿ

▶▶ ಮೊದಲನೇ ಪುಟದಿಂದ

ಮಾದಕ ವಸ್ತುಗಳ ವಿರೋಧಿ ದಿನಾಚರಣೆ ನಿಮಿತ್ತ ಬೈಕ್ ರ‍್ಯಾಲಿ, ಜಾಗೃತಿ ಜಾಥಾದಲ್ಲಿ ಪಾಲ್ಗೊಂಡು ಮಾತನಾಡುತ್ತಿದ್ದರು.

ಸಮಾಜ ಮಾದವ ವಸ್ತುಗಳಿಂದ ಮುಕ್ತವಾಗಿರಬೇಕು. ಮಾದಕ ವಸ್ತುಗಳ ಬಳಕೆ ಹಾಗೂ ಅಕ್ರಮ ಸಾಗಣೆಯಿಂದ ಉಂಟಾಗುವ ಸಮಸ್ಯೆಗಳ ಬಗ್ಗೆ ಜಾಗತಿಕವಾಗಿ ಅರಿವು ಮೂಡಿಸುವ ಸಲುವಾಗಿ 1987 ಡಿಸೆಂಬರ್ 7ರಂದು ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಜೂನ್ 26ನ್ನು ಅಂತಾರಾಷ್ಟ್ರೀಯ ಮಾದಕ ವಸ್ತುಗಳ ದುರುಪಯೋಗ ಮತ್ತು ಕಾನೂನು ಬಾಹಿರ ಸಾಗಾಟ ವಿರೋಧಿ ದಿನ ಆಚರಿಸಲಾಗುತ್ತದೆ ಎಂದರು.

ಪೊಲೀಸ್ ಠಾಣೆಯಿಂದ ಪ್ರಾರಂಭವಾದ ಬೈಕ್ ರ‍್ಯಾಲಿ ಪಟ್ಟಣದ ಮುಖ್ಯ ಬಜಾರ್ ರಸ್ತೆ ಮೂಲಕ ಸಾಗಿ ಪಂಪ ವೃತ್ತ, ಕೋರ್ಟ್ ಸರ್ಕಲ್, ಆಸಾರ ಓಣಿ, ವಿದ್ಯಾರಣ್ಯ ಸರ್ಕಲ್, ಶಿಗ್ಗಿ ನಾಕಾ, ಗದಗ ನಾಕಾ, ಬಸ್ ನಿಲ್ದಾಣ ಇತ್ಯಾದಿ ಪ್ರಮುಖ ಮಾರ್ಗಗಳಲ್ಲಿ ಸಂಚರಿಸಿತು. ರ‍್ಯಾಲಿಯಲ್ಲಿ ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಪಿಎಸ್‌ಐ ನಾಗರಾಜ ಗಡಾದ, ಕ್ರೈಂ ಪಿಎಸ್‌ಐ ಟಿ.ಕೆ. ರಾಠೋಡ, ಎಸ್. ಎಸ್. ಮಕಾಂದಾರ, ಎ.ಎನ್. ಮೌಲ್ವಿ, ವೈ.ಸಿ. ದೊಡ್ಡಮನಿ ಮುಂತಾದವರಿದ್ದರು.

### ಭೂ ಮಾಫಿಯಾಗಳ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಸ್ಲಂ ನಿವಾಸಿಗಳಿಂದ ಜಿಲ್ಲಾಧಿಕಾರಿಗಳಿಗೆ ಮನವಿ

# ಭೂಗಳ್ಳರ ವಿರುದ್ಧ ಕ್ರಮ ಕೈಗೊಳ್ಳಿ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರದ ವ್ಯಾಪ್ತಿಯಲ್ಲಿ ಬರುವ ಸ.ನಂ 594ರ ಆಸ್ತಿಯಲ್ಲಿ ಸುಮಾರು 80ಕ್ಕೂ ಹೆಚ್ಚು ಬಡವರು ವಾಸವಾಗಿದ್ದು, ಭೂ ಮಾಫಿಯಾಗಳು ಬಡ ಜನರನ್ನು ಒಕ್ಕಲೆಬ್ಬಿಸುವ ಕುತಂತ್ರ ನಡೆಸುತ್ತಿರುವುದನ್ನು ಖಂಡಿಸಿ ಸ್ಲಂ ಜನಾಂದೋಲನ-ಕರ್ನಾಟಕ ಮತ್ತು ಗದಗ ಜಿಲ್ಲಾ ಸ್ಲಂ ಸಮಿತಿಯ ಪದಾಧಿಕಾರಿಗಳು ಜಿಲ್ಲಾಧಿಕಾರಿಗಳಿಗೆ ಮನವಿ ನೀಡಿ ಭೂಗಳ್ಳರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್. ಮಾನ್ವಿ ಮಾತನಾಡಿ, ಕಳೆದ 25 ವರ್ಷಗಳಿಂದ ನಗರದ ಕೂಲಿ ಕಾರ್ಮಿಕರು, ಕಟ್ಟಡ ಕಾರ್ಮಿಕರು, ಅಸಂಘಟಿತ ಕಾರ್ಮಿಕರು ಮತ್ತು ಹಿಂದುಳಿದ ಸಮುದಾಯದ ಕುಟುಂಬಗಳು ಮನೆಗಳನ್ನು ನಿರ್ಮಿಸಿಕೊಂಡು ವಾಸಿಸುತ್ತ ಬಂದಿದ್ದಾರೆ. ನವನಗರ ಸ್ಲಂ ಪ್ರದೇಶದಲ್ಲಿ ನೂರಾರು ಬಡ ಕುಟುಂಬಗಳು ಯಾವುದೇ ನಾಗರಿಕ ಸೌಲಭ್ಯಗಳು ಇಲ್ಲದೇ ತಮ್ಮ ಜೀವನವನ್ನು ನಡೆಸುತ್ತಿದ್ದಾರೆ. ಹಿಂದುಳಿದ ಪ್ರದೇಶವಾಗಿರುವ ನವನಗರ ಪ್ರದೇಶವನ್ನು ಸ್ಲಂ ಎಂದು ಘೋಷಣೆ ಮಾಡಲು ಈಗಾಗಲೇ ಸ್ಲಂ ಬೋರ್ಡ್‌ನಿಂದ ದಾಖಲಗಳನ್ನು ಪಡೆದುಕೊಂಡು ಸ್ಲಂ ಕಾಯ್ದೆ 1973 ಪ್ರಕಾರ ಅಧಿಕೃತವಾಗಿ ಘೋಷಣೆ ಮಾಡುವ ಹಂತದಲ್ಲಿದೆ. ಆದರೆ ಇತ್ತೀಚೆಗೆ ಭೂ ಮಾಲಿಕನ ಹಿಂಬಾಲಕರು ಹಾಗೂ ಭೂ ಮಾಫಿಯಾಗಳು ಸ್ಥಳೀಯ ನಿವಾಸಿಗಳಿಗೆ ಮನೆಗಳನ್ನು ತೆರವುಗೊಳಿಸಬೇಕೆಂದು ದಬ್ಬಾಳಿಕೆ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

> ಸ್ಥಳೀಯ ಬಡ ಹಾಗೂ ಶೋಷಿತ ಸಮುದಾಯದ ಕುಟುಂಬಗಳು ಲಕ್ಷಾಂತರ ಹಣವನ್ನು ಖರ್ಚು ಮಾಡಿ ಪ್ರಧಾನ ಮಂತ್ರಿ ಆವಾಸ್ ಯೋಜನೆಡಿಯಲ್ಲಿ ಮನೆಗಳನ್ನು ನಿರ್ಮಿಸಿಕೊಂಡಿದ್ದಾರೆ. ಕೂಡಲೇ ಜಿಲ್ಲಾಧಿಕಾರಿಗಳು ಸ್ಲಂ ಜನರ ಮನವಿಯನ್ನು ಗಂಭೀರವಾಗಿ ಪರಿಗಣಿಸಿ ನವನಗರ ಸ್ಲಂ ಪ್ರದೇಶದಲ್ಲಿ ಮನೆಗಳನ್ನು ನಿರ್ಮಿಸಿಕೊಂಡಿರುವ ಬಡ ಹಾಗೂ ಶೋಷಿತ ಸಮುದಾಯಗಳ ಕುಟುಂಬಗಳಿಗೆ ರಕ್ಷಣೆ ನೀಡಬೇಕು ಎಂದು ಇಮ್ತಿಯಾಜ್ ಮಾನ್ವಿ ಆಗ್ರಹಿಸಿದರು.

ಸ್ಲಂ ಸಮಿತಿ ಕಾರ್ಯದರ್ಶಿ ಅಶೋಕ ಕುಸಬಿ, ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ, ಸ್ಲಂ ಸಮಿತಿ ಮುಖಂಡರಾದ ಶರಣಪ್ಪ ಸೂಡಿ, ಇಬ್ರಾಹಿಂ ಮುಲ್ಲಾ, ಮೆಹಬೂಬಸಾಬ ಬಳ್ಳಾರಿ, ಮೌಲಾಸಾಬ ಗಚ್ಚಿ, ವೆಂಕಟೇಶ ಬಿಂಕದಕಟ್ಟಿ, ಖಾಜಾಸಾಬ ಇಸ್ಮಾಯಿಲನವರ, ಸಲೀಂ ಹರಿಹರ, ಅಶೋಕ ಗುಮಾಸ್ತೆ, ಗೌಸಮೊದ್ದಿನ ಅಕ್ಕಿ, ಮೆಹರುನಿಸಾ ಡಂಬಳ, ಸಂಜು ಬೀಡದೆ, ಮೆಹಬೂಬ ಹುಯಿಲಗೋಳ, ಖಾಜಾಸಾಬ ಉಮಚಗಿ, ಶಂಕ್ರಪ್ಪ ಲಕ್ಷ್ಮೇಶ್ವರ, ಆನಂದಪ್ಪ ಮುಳಗುಂದ, ಮೈಮುನ ಬೈರಕದಾರ, ದಾದು ಗೋಸಾವಿ, ಜಂದಿಸಾಬ ಬಳ್ಳಾರಿ, ಬಸವರಾಜ ಕಳಸದ, ಜಾಫರ ಮಲಬಾರ, ದುರ್ಗಪ್ಪ ಮಣವಡ್ಡರ, ಮಂಜುನಾಥ ಶ್ರೀಗಿರಿ, ಮಕ್ತುಮಸಾಬ ಮುಲ್ಲಾನವರ, ರಿಜ್ವಾನ ಮುಲ್ಲಾ, ರವಿ ಗೋಸಾವಿ ಸೇರಿದಂತೆ ನೂರಾರು ಸ್ಲಂ ನಿವಾಸಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಧ್ಯಾನದಿಂದ ಸಕಲ ರೋಗ ಪರಿಹಾರ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಆಧ್ಯಾತ್ಮಿಕ ಜೀವನ ಮನುಷ್ಯನ ಮನೋಸ್ಥೈರ್ಯಕ್ಕೆ ರಾಮಬಾಣವಾಗಿದೆ. ನಿತ್ಯವೂ ಧ್ಯಾನ ಮಾಡುವುದರಿಂದ ಮಾನಸಿಕ ಕಾಯಿಲೆಗಳ ಜೊತೆಗೆ ಅನೇಕ ರೋಗಗಳಿಗೂ ಅದು ಉತ್ತಮ ಪರಿಹಾರವಾಗಿದೆ ಎಂದು ಗದಗ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಮುಖ್ಯಸ್ಥೆ ಬಿ. ಕೆ. ಜಯಂತಿ ಅಕ್ಕನವರು ಹೇಳಿದರು.

ಪಟ್ಟಣದ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ನಡೆದ ರಾಜಸ್ಥಾನದ ಕೇಂದ್ರಸ್ಥಾನ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಸನ್ಯಾಸಿನಿ ಜಗದಂಬಾ ಸರಸ್ವತಿಯವರ ಸ್ಮೃತಿ ದಿನಾಚರಣೆಯನ್ನುದ್ದೇಶಿಸಿ ಅವರು ಮಾತನಾಡಿದರು.

ಆಧ್ಯಾತ್ಮಿಕ ಶಿಕ್ಷಣ ಸಂಸ್ಥೆಯಾಗಿರುವ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿಯ ವಿಶ್ವವಿದ್ಯಾಲಯದಂತಹ ಸಂಸ್ಥೆಯನ್ನು ತಮ್ಮ 16ನೇ ವಯಸ್ಸಿನಲ್ಲಿಯೇ ರಾಜಸ್ಥಾನದ ಅಬು ಪರ್ವತದಲ್ಲಿ ಸ್ಥಾಪಿಸಿ ಸಂಸ್ಥೆಯ ಬೆನ್ನೆಲುಬಾಗಿ ನಿಂತವರು ಜಗದಂಬಾ ಸರಸ್ವತಿಯವರು. ಅವರು 1952ರಲ್ಲಿ ಕರ್ನಾಟಕಕ್ಕೆ ಹೃದಯ ಪುಷ್ಪ ದಾದಿಯಾಗಿ ಪರಿಚಿತಗೊಂಡರು. ಅವರೊಂದಿಗೆ ರಾಜಋಷಿ ದಾದಾ ಲೇಖರಾಜರ ಆಧ್ಯಾತ್ಮದ ಜ್ಞಾನದಿಂದಾಗಿ ಇಂದು ದೇಶದಾದ್ಯಾಂತ ಸಾವಿರಾರು ಕೇಂದ್ರಗಳನ್ನು ತೆರೆಯುವಂತಾಗಿದೆ ಎಂದು ತಿಳಿಸಿದರು.

ನರೇಗಲ್ಲ ಪ್ರಜಾಪಿತ ಈಶ್ವರೀಯ ವಿಶ್ವವಿದ್ಯಾಲಯದ ಸಂಚಾಲಕಿ ಬಿ.ಕೆ. ಸವಿತಕ್ಕ ಮಾತನಾಡಿ, ಆಧ್ಯಾತ್ಮ ಶಿಕ್ಷಣ ಮನಸ್ಸನ್ನು ಶಾಂತಗೊಳಿಸುವುದಲ್ಲದೆ ಒತ್ತಡ ಮುಕ್ತ ಜೀವನ ಸಾಗಿಸಲು ಸಹಕಾರಿಯಾಗಲಿದೆ. ಪ್ರತಿನಿತ್ಯ ನಮ್ಮ ಸಂಸ್ಥೆಯಲ್ಲಿ ಜನಸಾಮಾನ್ಯರ ಒತ್ತಡ ಮುಕ್ತ ಜೀವನಕ್ಕಾಗಿ ಆಧ್ಯಾತ್ಮ ಜ್ಞಾನವನ್ನು ಉಣಬಡಿಸಲಾಗುತ್ತಿದೆ. ಇಂತಹ ಹಲವಾರು ಕೇಂದ್ರಗಳಲ್ಲಿ ಆಧ್ಯಾತ್ಮಿಕ ಶಿಕ್ಷಣ ನೀಡುತ್ತಿರುವ ನಮಗೆಲ್ಲರಿಗೂ ಜಯಂತಿ ಅಕ್ಕನವರು ಸಮರ್ಪಕ ಮಾರ್ಗದರ್ಶಕರಾಗಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಮಂಜುನಾಥ ಹಿರೇಮಠ, ರಾಜಣ್ಣ ಭೋಪಳಾಪುರ, ಧರ್ಮಾಯತ, ಹೊಸಮನಿ, ಇನ್ನಿತರರು ಉಪಸ್ಥಿತರಿದ್ದರು.

### ಮಣ್ಣು, ಎತ್ತುಗಳಿಗೆ ಕೃತಜ್ಞತೆ ಸಲ್ಲಿಸುವ ಮಣ್ಣೆತ್ತಿನ ಹಬ್ಬದ ಸಂಭ್ರಮಾಚರಣೆಗೆ ಸಜ್ಜಾದ ರೈತ ಬಂಧುಗಳು

# ಮಣ್ಣೆತ್ತಿನ ಮೂರ್ತಿಗಳ ಮಾರಾಟದ ಭರಾಟೆ ಜೋರು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕೃಷಿಕರ ಬದುಕಿಗೆ ಆಧಾರವಾದ ಮಣ್ಣು ಮತ್ತು ಎತ್ತುಗಳಿಗೆ ಕೃತಜ್ಞತೆ ಸಲ್ಲಿಸುವ ಸಂಪ್ರದಾಯದ ಮಣ್ಣೆತ್ತಿನ ಅಮವಾಸ್ಯೆ ಹಬ್ಬದ ಆಚರಣೆಗಾಗಿ ಪಟ್ಟಣದಲ್ಲಿ ಮಂಗಳವಾರದಿಂದಲೇ ಮಣ್ಣೆತ್ತಿನ ಮೂರ್ತಿಗಳ ಮಾರಾಟದ ಭರಾಟೆ ಜೋರಾಗಿಯೇ ನಡೆಯಿತು. ವಿಶೇಷವಾಗಿ ಬೇಕಾದ ಮಣ್ಣಿನ ಕೊರತೆ, ಖರ್ಚುವೆಚ್ಚ ಹೆಚ್ಚಳದಿಂದ ಮಣ್ಣೆತ್ತಿನ ಮೂರ್ತಿಗಳ ಬೆಲೆಯಲ್ಲೂ ವರ್ಷದಿಂದ ವರ್ಷಕ್ಕೆ ಹೆಚ್ಚಳವಾಗುತ್ತಿದೆ.

ಪ್ರಸಕ್ತ ವರ್ಷ ಉತ್ತಮ ಮುಂಗಾರು ಮಳೆ-ಬೆಳೆ ರೈತರಲ್ಲಿ ಹೊಸ ಭರವಸೆ, ಹರ್ಷ ಮೂಡಿಸಿದ್ದು ಇತ್ತೀಚೆಗಷ್ಟೇ ಕಾರಹುಣ್ಣಿಮೆ ಹಬ್ಬದ ಸಂಭ್ರಮ ಸವಿದ ರೈತ ಸಮುದಾಯ ಮತ್ತೀಗ ಮಣ್ಣೆತ್ತಿನ ಹಬ್ಬದ ಸಂಭ್ರಮಾಚರಣೆಗೆ ಸಜ್ಜಾಗಿದ್ದಾರೆ. ಶಿವನ ವಾಹನವೂ ಆದ ನಂದಿಯು ಇದೇ ಅಮವಾಸ್ಯೆ ದಿನ ಜನ್ಮ ತಾಳಿದೆ ಎಂಬ ನಂಬಿಕೆಯೂ ಜನಪದರಲ್ಲಿದೆ.

ರೈತರ ಕುಟುಂಬದವರು ಮಣ್ಣೆತ್ತಿನ ಅಮವಾಸ್ಯೆ ದಿನ ಮಣ್ಣೆತ್ತಿನ ಮೂರ್ತಿಗಳು ಅದರ ಗ್ವಾದಲಿ ಇರುವಂತೆ ಜಗುಲಿಯ ಮೇಲಿಟ್ಟು ಕರಿಗಡುಬು, ಕಿಚಡಿ ಪ್ರಸಾದ ಮಾಡಿ ಶ್ರದ್ಧಾ ಭಕ್ತಿಯಿಂದ ಪೂಜಿಸುತ್ತಾರೆ. ಕೆಲವರು ಹಬ್ಬದ ದಿನ ಮಾತ್ರ ಕೆಲವರು ನಾಗರ ಪಂಚಮಿವರೆಗೂ ಪೂಜಿಸಿ ನಂತರ ಮೂರ್ತಿಗಳನ್ನು ತಮ್ಮ ಹೊಲಗಳಲ್ಲಿನ ಬನ್ನಿ ಮರದ ಕೆಳಗಿಟ್ಟು ಉತ್ತಮ ಫಸಲು ಬರಲಿ, ಎತ್ತುಗಳಿಗೆ ಯಾವುದೇ ಖಾಯಿಲೆ ಬಾರದಿರಲಿ ಎಂದು ನಮಿಸುತ್ತಾರೆ. ಕೆಲವರು ವರ್ಷ ಪೂರ್ತಿ ಪೂಜಿಸಿ ಹೊಲದ ಮರದಡಿ ಇಡುವ ಪದ್ಧತಿಯೂ ಇದೆ.

ಮಣ್ಣೆತ್ತಿನ ಹಬ್ಬಕ್ಕೆ ಲಕ್ಷ್ಮೇಶ್ವರದ 20ಕ್ಕೂ ಹೆಚ್ಚು ಕುಂಬಾರರ ಮನೆಗಳಲ್ಲಿ 3–4 ತಿಂಗಳಿಂದ ಸಿದ್ಧಗೊಳಿಸಿದ ಸಾವಿರಾರು ಸುಂದರ ಮಣ್ಣೆತ್ತಿನ ಮೂರ್ತಿಗಳಿಗೆ ಹತ್ತಾರು ಜಿಲ್ಲೆಗಳಿಂದ ಡಿಮ್ಯಾಂಡ್ ಇದೆ. ಪಟ್ಟಣದಿಂದ ದಾವಣಗೆರೆ, ಹರಿಹರ, ರಾಣೆಬೆನ್ನೂರ, ಧಾರವಾಡ, ಶಿವಮೊಗ್ಗ, ಗದಗ, ಕೊಪ್ಪಳ, ಬೆಳಗಾವಿ, ಹಾವೇರಿ, ಹುಬ್ಬಳ್ಳಿ ಸೇರಿ ಸುತ್ತಮುತ್ತಲಿನ ಗ್ರಾಮಗಳಿಗೆ ಮೂರ್ತಿಗಳು ಮಾರಾಟವಾಗುತ್ತಿವೆ.

ತಿಂಗಳುಗಳ ಮೊದಲೇ ವಿಶೇಷ ಮಣ್ಣನ್ನು ಸಂಗ್ರಹಿಸಿ ಸಂಪ್ರದಾಯದಂತೆ ಹದ ಮಾಡಿ ಮೂರ್ತಿಗಳ ತಯಾರಿಕೆ ಮಾಡುತ್ತಾರೆ. ಈ ಮೂರ್ತಿಗಳಿಗೆ ಗಣೇಶ ಮೂರ್ತಿಗಳಂತೆ ಬಣ್ಣದ ಅಲಂಕಾರ ಮಾಡಿರುತ್ತಾರೆ. ಮೂರ್ತಿಗಳು ಕೆಳಗೆ ಬಿದ್ದರೂ ಒಡೆಯುವುದಿಲ್ಲ. ವರ್ಷಪೂರ್ತಿ ಇಟ್ಟರೂ ಬಣ್ಣ ಮಾಸುವುದಿಲ್ಲ. ಕೊಡುಗಳಿಗೆ ಕೊಂಬೆಣಸು, ಇಣಿಗವಚ, ಜೂಲಾ, ಕೊರಳಿಗೆ ಗಂಟೆ ಸರ, ಹಣೆಪಟ್ಟಿ, ಕಾಲ್ಗೆಜ್ಜೆ, ಮೂಗುದಾರ, ವಿಭೂತಿ, ಕಣ್ಣು, ಕಿವಿ, ಮೂಗು, ಬಾಯಿ ಬರೆದು ಮೂರ್ತಿಗಳನ್ನು ಚಂದಗಾಣಿಸುತ್ತಾರೆ. ಇಲ್ಲಿನ ಜೋಡೆತ್ತಿನ ಸಣ್ಣ ಮೂರ್ತಿಗಳು ಸಣ್ಣ 50, ಮಧ್ಯಮ 80, 100, 200 ರೂಗಳಿಗೆ ಮಾರಿದರೆ ವಿಶೇಷವಾಗಿ ತಯಾರಿಸಿದ ಎತ್ತುಗಳಿಗೆ 500ರಿಂದ 1000, 2000 ರೂವರೆಗೂ ಮಾರಾಟವಾಗುತ್ತವೆ. ಪ್ರತಿವರ್ಷ ಲಕ್ಷ್ಮೇಶ್ವರ ಪಟ್ಟಣವೊಂದರಲ್ಲಿಯೇ 40 ಸಾವಿರಕ್ಕೂ ಹೆಚ್ಚು ಮೂರ್ತಿಗಳು ಸಿದ್ಧಗೊಂಡು ಮಾರಾಟವಾಗುತ್ತವೆ.

> ತಮ್ಮ ಜೀವನಾಡಿಯಾದ ಎತ್ತುಗಳ ಮೇಲೆ ರೈತರಿಗೆ ಅಪಾರ ಪ್ರೀತಿ. ಇತ್ತೀಚೆಗೆ ಯಂತ್ರೋಪಕರಣಗಳು ಕೃಷಿ ಕೆಲಸಕ್ಕೆ ಸಹಾಯಕವಾಗಿದ್ದರೂ ಎತ್ತುಗಳ ಅವಶ್ಯಕತೆ ತಳ್ಳಿಹಾಕದಂತಿದೆ. ರೈತರ ಎಲ್ಲ ಕಾರ್ಯಗಳಿಗೆ ಹೆಗಲು ಕೊಡುವ ಎತ್ತುಗಳಿಗೆ ಹಿಂದಿನಿಂದಲೂ ಪೂಜ್ಯನೀಯ ಸ್ಥಾನಮಾನವಿದ್ದು ಎತ್ತುಗಳು ರೈತರ ಮನೆಗೆ ಶೋಭೆ ಮತ್ತು ಮಂಗಳಕರವಾಗಿವೆ. ಮುಂಗಾರಿನಲ್ಲಿ ಬಿತ್ತಿದ ಬೆಳೆಗಳು ಫಲವತ್ತಾಗಿ ಬರಲಿ ಮತ್ತು ತಮ್ಮ ಎತ್ತುಗಳಿಗೆ ಯಾವ ತೊಂದರೆ ಬಾರದಿರಲಿ. ಅವುಗಳಿಂದ ನಮ್ಮ ಬಾಳು ಹಸನಾಗಲೆಂಬ ಭಾವನೆಯಿಂದ ಈ ಮಣ್ಣೆತ್ತಿನ ಅಮವಾಸ್ಯೆ ಆಚರಿಸಲಾಗುತ್ತದೆ.
>
> **– ವಿರೂಪಾಕ್ಷ ಆದಿ, ರಾಜಣ್ಣ ಹವಳದ.**
> ರೈತರು–ಲಕ್ಷ್ಮೇಶ್ವರ.



> ವರ್ಷದಿಂದ ವರ್ಷಕ್ಕೆ ನಮ್ಮೂರ ಮೂರ್ತಿಗಳಿಗೆ ಬೇಡಿಕೆ ಹೆಚ್ಚುತ್ತಿದ್ದು, ಸಿದ್ಧಪಡಿಸಿದ ಮೂರ್ತಿಗಳಲ್ಲಿ ಬಹಳಷ್ಟು ಬೇರೆ ಜಿಲ್ಲೆ, ತಾಲೂಕುಗಳಿಗೆ ಮಾರಾಟ ಮಾಡಲಾಗುತ್ತದೆ. ಮಣ್ಣೆತ್ತಿನ ಮೂರ್ತಿಗಳ ಮಾರಾಟ ನಮ್ಮ ಬದುಕಿಗೆ ಆಸರೆಯಾಗಿದೆ. ಆದರೆ ಇತ್ತೀಚಿನ ವರ್ಷಗಳಲ್ಲಿ ಮೂರ್ತಿ ತಯಾರಿಕೆಗೆ ಅವಶ್ಯವಾದ ಮಣ್ಣಿನ ಕೊರತೆ ಕಾಡುತ್ತಿದೆ. ಮಣ್ಣಿರುವ ಸ್ಥಳದಿಂದ ತರಲು ಅರಣ್ಯ ಇಲಾಖೆಯ ನಿಯಮಾವಳಿ ಅತ್ಯಂತ ಕಷ್ಟದಾಯಕವಾಗಿದೆ. ರೈತರ ಸಂಪ್ರದಾಯಬದ್ಧ ಪೂಜೆಗೆ ಮಳೆರಾಯ ಕೃಪೆ ತೋರಲಿ. ಉತ್ತಮ ಮಳೆಬೆಳೆ ಬಂದು ಅನ್ನದಾತರ ಬದುಕು ಹಸನಾಗಲಿ.
>
> **– ಅಭಿಷೇಕ ಕುಂಬಾರ, ಪ್ರಕಾಶ ಕುಂಬಾರ.**
> ಮೂರ್ತಿ ತಯಾರಕರು.

## ನೇರ ಸಂದರ್ಶನ

■ವಿಜಯಸಾಕ್ಷಿ ಸುದ್ದಿ, ಗದಗ

2025–26ನೇ ಸಾಲಿಗೆ ಪಿಎಂ– ಎ.ಬಿ.ಎಚ್.ಐ.ಎಮ್ ಯೋಜನೆಯಲ್ಲಿ ಖಾಲಿ ಇರುವ 13 ಎಮ್.ಬಿ.ಬಿ.ಎಸ್ ವೈದ್ಯಾಧಿಕಾರಿಗಳ ಹುದ್ದೆಗೆ ರೋಸ್ಟರ್ ಹಾಗೂ ಮೆರಿಟ್ ಆಧಾರದ ಮೇಲೆ ಒಂದು ವರ್ಷದ ಅವಧಿಗೆ ದಿ. 31–3– 2026 ವರೆಗೆ ನೇರ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಲು ಪ್ರತಿ ದಿನ ಮಧ್ಯಾಹ್ನ 3:00 ಗಂಟೆಯ ನಂತರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ, ಗದಗ ಇಲ್ಲಿ ನೇರ ಸಂದರ್ಶನ ಇರುತ್ತದೆ,

ರಜಾ ದಿನಗಳನ್ನು ಹೊರತು ಪಡಿಸಿ. ಸದರಿ ನೇಮಕಾತಿ ಕುರಿತು ಹೆಚ್ಚಿನ ಮಾಹಿತಿಗಾಗಿ ರಜಾ ದಿನಗಳನ್ನು ಹೊರತು ಪಡಿಸಿ ಕಚೇರಿ ಸಮಯದಲ್ಲಿ ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕರ ಘಟಕ ಎನ್ ಎಚ್ ಎಮ್ , ರೂಂ.ನಂ 101, ಗದಗ ಕಚೇರಿ ಅವಧಿಯಲ್ಲಿ ಪಡೆಯಬಹುದು ಹಾಗೂ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ಆಯ್ಕೆ ಸಮಿತಿಯ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ನಾಳೆ ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಗದಗ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳುವುದರಿಂದ ಜೂನ್ 26ರ ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

ಸದರಿ ಉಪಕೇಂದ್ರಗಳಿಂದ ಪೂರೈಕೆಯಾಗುವ ಜಿಮ್ಸ್ ಆಸ್ಪತ್ರೆ, ಕುಡಿಯುವ ನೀರಿನ ಸ್ಥಾವರಗಳು, 33 ಕೆವ್ಹಿ ಐ.ಪಿಪಿ–ಕೆ.ಪಿ.ಸಿ.ಎಲ್, ನಾಗಾವಿ, ಮಲ್ಲಸಮುದ್ರ, ಪಯೋನಿರ್, ಟಿ.ಡಿ.ಪಿ ಎಲ್ 1, ಮತ್ತು 2, 33 ಕೆವಿ ಉಪಕೇಂದ್ರ–ಹುಲಕೋಟಿ, ಲಕ್ಕುಂಡಿ, ಕೆ.ಎಚ್.ಬಿ ಹಾಗೂ ಎಲ್ಲಾ 11 ಕೆವ್ಹಿ ನಗರ, ಗ್ರಾಮೀಣ, ಕೈಗಾರಿಕಾ, ಸೋಲಾರ್ ಐ.ಪಿ.ಪಿ, ಮತ್ತು ನೀರಾವರಿ ಪಂಪ್‌ಸೆಟ್‌ಗಳ ವಿದ್ಯುತ್ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಕಾರಣ ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಹೆಸ್ಕಾಂ ಪ್ರಕಟಣೆ ವಿನಂತಿಸಿದೆ.

## ದುಡ್ಡು ಪಡೆದು ಮನೆ ಕೊಟ್ಟರೆ ಹುಳ ಬಿದ್ದು ಸಾಯುತ್ತೇವೆ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ದುಡ್ಡು ಪಡೆದು ಮನೆ ಕೊಟ್ಟರೆ ಹುಳ ಬಿದ್ದು ಸಾಯುತ್ತೇವೆ ಎಂದು ಬಿಜೆಪಿ ನಾಯಕರ ಆರೋಪಕ್ಕೆ ವಸತಿ ಸಚಿವ ಜಮೀರ್ ಅಹಮದ್ ಖಾನ್ ಕಿಡಿಕಾರಿದ್ದಾರೆ. ನಗರದಲ್ಲಿ ಮಾತನಾಡಿದ ಅವರು, ಬಿಜೆಪಿಗರು ಹೇಳುವುದೇ ಬೇಡ ನಾನೇ ರಾಜೀನಾಮೆ ನೀಡುತ್ತೇನೆ. ಯಾರ ಬಳಿಯೂ ನಾವು ದುಡ್ಡು ಪಡೆದು ಮನೆ ಕೊಟ್ಟಿಲ್ಲ. ರಾಮನಗರಕ್ಕೆ ಕೂಡ ಮನೆ ಕೊಟ್ಟಿದ್ದೇವೆ. ಎಲ್ಲರಿಗೂ ಮನೆ ಕೊಟ್ಟಿದ್ದೇವೆ.

ದುಡ್ಡು ಪಡೆದು ಮನೆ ಕೊಟ್ಟರೆ ಹುಳ ಬಿದ್ದು ಸಾಯುತ್ತೇವೆ. ಬಡವರ ಹಣ ಪಡೆದ್ರೆ ನಮ್ಮ ಮಕ್ಕಳಿಗೆ ಒಳ್ಳೆಯದಾಗುತ್ತಾ?. ಯಾರು ಹಣ ಪಡೆದಿದ್ದಾರೆ ಎಂದು ಪಾಟೀಲ್ ಹೇಳಲಿ.

## ರಾಜ್ಯಮಟ್ಟದ ಕರಾಟೆ ಚಾಂಪಿಯನ್‌ಶಿಪ್‌ನಲ್ಲಿ ಸಾಧನೆ



■ವಿಜಯಸಾಕ್ಷಿ ಸುದ್ದಿ, ಗದಗ

ಅದರಗುಂಚಿಯಲ್ಲಿ ನಡೆದ 2ನೇ ರಾಜ್ಯಮಟ್ಟದ ಕರಾಟೆ ಚಾಂಪಿಯನ್‌ಶಿಪ್‌ನಲ್ಲಿ ನಗರದ ಅಮರೇಶ್ವರ ನಗರದಲ್ಲಿರುವ ರಾಯಲ್ ಯೂಥ್ ಮಾರ್ಷಲ್ ಆರ್ಟ್ಸ್ ಅಸೋಸಿಯೇಶನ್ ಕರಾಟೆ ವಿದ್ಯಾರ್ಥಿಗಳು ಸಾಧನೆಗೈದಿದ್ದಾರೆ.

ಕರಾಟೆ ವಿದ್ಯಾರ್ಥಿಗಳಾದ ಮಹಮ್ಮದಹಾಜಿದ ಕಾಗದಗಾರ ಪ್ರಥಮ, ಮಹಮ್ಮದರುಬೈಯ ಕೋನಸಾಗರ ದ್ವಿತೀಯ, ತನ್ವೀರ ಕದಡಿ ದ್ವೀತಿಯ ಸ್ಥಾನ ಪಡೆದುಕೊಂಡು ಗದಗ ನಗರಕ್ಕೆ ಹಾಗೂ ಅಸೋಸಿಯೇಶನ್‌ಗೆ ಕೀರ್ತಿ ತಂದಿದ್ದಕ್ಕಾಗಿ ಈ ಮೂವರು ವಿದ್ಯಾರ್ಥಿಗಳಿಗೆ ಮುಖ್ಯ ತರಬೇತುದಾರರ ಮೆಹಬೂಬ ದೊಡ್ಡಮನಿ, ಮೇಘರಾಜ ವಾಲ್ಮೀಕಿ, ಎಲ್ಲ ಪಾಲಕರು ಹಾಗೂ ಅಸೋಸಿಯೇಶನ್ ಪದಾಧಿಕಾರಿಗಳು ಅಭಿನಂದಿಸಿದ್ದಾರೆ.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2024–25ನೇ ಸಾಲಿನಲ್ಲಿ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಖೇಲೋ ಇಂಡಿಯಾ ಸೈಕ್ಲಿಂಗ್ ಕೇಂದ್ರ ತೆರೆಯಲು ಮಾನ್ಯ ಆಯುಕ್ತರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಗದಗ ಜಿಲ್ಲಾ ಖೇಲೋ ಇಂಡಿಯಾ ಕ್ರೀಡಾಪಟುಗಳಿಗೆ ತರಬೇತಿ ನೀಡಲು ಸೈಕ್ಲಿಂಗ್ ತರಬೇತುದಾರರ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಖೇಲೋ ಇಂಡಿಯಾ ಸೈಕ್ಲಿಂಗ್ ಕೇಂದ್ರಕ್ಕೆ ಒಬ್ಬ ತರಬೇತುದಾರರ ಅವಶ್ಯಕತೆ ಇದ್ದು, ಒಂದು ವರ್ಷದ ಅವಧಿಗೆ ಗುತ್ತಿಗೆ ಆಧಾರದ ಮೇಲೆ ಆಯ್ಕೆ ಸಮಿತಿಯು ತರಬೇತುದಾರರನ್ನು ಆಯ್ಕೆ ಮಾಡಲಿದ್ದು, ಸದರಿ ತರಬೇತುದಾರರು ಅಂತಾರಾಷ್ಟ್ರೀಯ, ರಾಷ್ಟ್ರೀಯ ಮಟ್ಟದ ಸೈಕ್ಲಿಂಗ್ ಸ್ಪರ್ಧೆಯಲ್ಲಿ ಭಾಗವಹಿಸಿ ಪದಕ ವಿಜೇತರಾದವರಿಗೆ ಹಾಗೂ ಗದಗ ಜಿಲ್ಲೆಯವರಿಗೆ ಆದ್ಯತೆ ನೀಡಲಾಗುವುದು.

ಖೇಲೋ ಇಂಡಿಯಾ ತರಬೇತುದಾರರ ಹುದ್ದೆಗೆ ಈ ಕೆಳಕಂಡ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಸೈಕ್ಲಿಂಗ್ ಕ್ರೀಡೆಯಲ್ಲಿ ಸಾಧನೆ ಮಾಡಿದವರಿಗೆ ಹಾಗೂ ಗದಗ ರಹವಾಸಿಗಳಿಗೆ ಪ್ರಥಮ ಆಧ್ಯತೆ ನೀಡಲಾಗುವುದು. ಜಿಲ್ಲಾ ಮಟ್ಟದ ಸಮಿತಿಯಿಂದ ನಡೆಸಲಾದ ಸಂದರ್ಶನದ ಮೂಲಕ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ದಾಖಲೆಗಳನ್ನು ಪರಿಶೀಲಿಸಿ, ಒಂದು ವರ್ಷದ ಅವಧಿಗೆ ಗೌರವ ಸಂಭಾವನೆ ಆಧಾರದ ಮೇಲೆ ಆಯ್ಕೆ ಮಾಡಿಕೊಳ್ಳಲಾಗುವುದು.

ಅರ್ಹ ಅಭ್ಯರ್ಥಿಗಳು ದಿ: 02–07–2025ರ ಒಳಗಾಗಿ ಅರ್ಜಿಯನ್ನು ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ, ಗದಗ ಇಲ್ಲಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ, ದೂರವಾಣಿ ಸಂಖ್ಯೆ 08372–238345 ಇಲ್ಲಿ ನಿಗಧಿತ ಅರ್ಜಿ ಪಡೆದು ಭರ್ತಿ ಮಾಡಿ ಖುದ್ದಾಗಿ ಸಲ್ಲಿಸಲು ಪ್ರಕಟಣೆ ಮೂಲಕ ತಿಳಿಸಲಾಗಿದೆ.

## 'ಸಾವಿರ ವೃಕ್ಷ ಪ್ರಕೃತಿ ಸುಭಿಕ್ಷ' ಅಭಿಯಾನ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭವಿಷ್ಯತ್ತಿನ ಸುಭದ್ರ, ಸುರಕ್ಷಿತದ ದೃಷ್ಟಿಯಿಂದ ಎಲ್ಲರೂ ಗಿಡಮರಗಳನ್ನು ಬೆಳೆಸುವ, ರಕ್ಷಿಸುವ ಕಾರ್ಯ ಮಾಡಲೇಬೇಕು ಎಂದು ಮುಕ್ತಿಮಂದಿರ ಧರ್ಮಕ್ಷೇತ್ರದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಹೇಳಿದರು.

ಅವರು ಮಂಗಳವಾರ ಮುಕ್ತಿಮಂದಿರ ಧರ್ಮಕ್ಷೇತ್ರದಲ್ಲಿ ಶ್ರೀ ಮಹಾ ತಪಸ್ವಿ ಫೌಂಡೇಷನ್ ವತಿಯಿಂದ ಹಮ್ಮಿಕೊಳ್ಳಲಾದ 'ಸಾವಿರ ವೃಕ್ಷ ಪ್ರಕೃತಿ ಸುಭಿಕ್ಷ' ಅಭಿಯಾನದಡಿ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡುತ್ತಿದ್ದರು.

ಕೇವಲ ಜೂನ್ ತಿಂಗಳಲ್ಲಿ ಮಾತ್ರ ಸಸಿ ನೆಟ್ಟು ಪ್ರಚಾರ ಪಡೆದ ನಂತರ ನೆಟ್ಟ ಸಸಿಗೆ ಹನಿ ನೀರು ಹಾಕುವುದನ್ನೂ ಮರೆತರೆ ನೆಟ್ಟ ಸಸಿ ಒಣಗಿ ಹೋಗುತ್ತದೆ, ಇದು ಉತ್ತಮ ಕಾರ್ಯವಲ್ಲ. ಬದಲಾಗಿ ಭೂಮಿಯ ಮೇಲಿನ ಜೀವ ಸಂಕುಲದ ಭವಿಷ್ಯಕ್ಕಾಗಿ ಪರಿಸರ ಸ್ನೇಹಿ ಸಮಾಜ ನಿರ್ಮಿಸುವ ಹೊಣೆ ಎಲ್ಲರದ್ದಾಗಿದೆ. ಮಕ್ಕಳನ್ನು ಪೋಷಿಸಿದಂತೆ ಅರಣ್ಯ ಬೆಳೆಸುವ ಕಾರ್ಯವನ್ನು ನಿತ್ಯನೂತನವಾಗಿಸಬೇಕು ಎಂದರು.

ಪ್ರತಿಷ್ಠಾನದ ನಿರ್ದೇಶಕಿ ಸಂಗೀತಾ ಧರ್ಮಾಯತ ಮಾತನಾಡಿ, ಫೌಂಡೇಷನ್ ಸಂಸ್ಥಾಪಕರಾದ ಶ್ರೀ ಗುರುರಾಜ್ ಗುರೂಜಿ ಹಾಗೂ ಸಿಇಓ ಪ್ರಜ್ವಲ್ ನಾಯಕ ಮಾರ್ಗದರ್ಶನದಲ್ಲಿ ಜೂನ್ ತಿಂಗಳು ಪೂರ್ತಿ ಕರ್ನಾಟಕದ 27 ಉಪ ಶಾಖೆಯಲ್ಲಿ ಅಭಿಯಾನದಡಿ ಸಸಿ ನೆಡುವ, ಪೋಷಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಅರಳು ವಿಶೇಷ ಶಾಲೆಯ ಮುಖ್ಯೋಪಾಧ್ಯಾಯೆ ನೀಲಮ್ಮ ದಾಸಪ್ಪನವರ ಮಾತನಾಡಿದರು. ನಂತರ ಪ್ರತಿಷ್ಠಾನದ ಸೇವಾಕರ್ತರು ಪಟ್ಟಣದ ಅರಳು ವಿಶೇಷ ಅಗತ್ಯತೆಯುಳ್ಳ ಬುದ್ಧಿಮಾಂಧ್ಯ ಮಕ್ಕಳ ಶಾಲೆ, ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಸಸಿ ನೆಡಲಾಯಿತು. ನಂದಾ ಧರ್ಮಾಯತ, ಮಂಜುಳಾ ಮುಳಗುಂದ, ವೀರೇಶ ಹಳೆಮನೆ, ಗುರುಪ್ರಸಾದ ಹಿರೇಮಠ ಇತರರು ಭಾಗವಹಿಸಿದ್ದರು.

## ನಾಳೆ 'ತುರ್ತು ಪರಿಸ್ಥಿತಿ ಅಣಕು ಸಂಸತ್'



■ವಿಜಯಸಾಕ್ಷಿ ಸುದ್ದಿ, ಗದಗ

ಈ ವರ್ಷ ಜೂನ್ 25ಕ್ಕೆ ತುರ್ತು ಪರಿಸ್ಥಿತಿ ಘೋಷಣೆಯಾಗಿ 50 ವರ್ಷಗಳು ಗತಿಸಿದ ಪ್ರಯುಕ್ತ ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಯುವ ಮೋರ್ಚಾ ವತಿಯಿಂದ ಜಿಲ್ಲೆಯ ಮಂಡಲ ಮಟ್ಟದಿಂದ ಆಯ್ಕೆಯಾದ ಯುವಕ ಮತ್ತು ಯುವತಿಯರಿಗೆ ಅಂದಿನ ಕರಾಳ ದಿನಗಳು, ಮಾರಣಾಂತಿಕ ಹಲ್ಲೆ, ಹೋರಾಟ ಮತ್ತು ಸಂವಿಧಾನ ದುರ್ಬಳಕೆಯಾದ ಸಂಗತಿಗಳ ಮಾಹಿತಿಯನ್ನು ನೀಡಲು ಗದಗ ನಗರದ ರಾಜೀವಗಾಂಧಿ ನಗರದಲ್ಲಿರುವ ಡಾ. ಬಿ.ಎಫ್. ದಂಡಿನ ಕಾನೂನು ಕಾಲೇಜಿನ ಆಡಿಟೋರಿಯಂನಲ್ಲಿ ಜೂನ್ 26ರ ಬೆಳಿಗ್ಗೆ 10.30 ಗಂಟೆಗೆ ತುರ್ತು ಪರಿಸ್ಥಿತಿ ಅಣಕು ಸಂಸತ್ತು ಏರ್ಪಡಿಸಲಾಗಿದೆ. ಕಾರ್ಯಕ್ರಮದಲ್ಲಿ ಶಾಸಕರು, ಮಾಜಿ ಸಚಿವರಾದ ಸಿ.ಸಿ. ಪಾಟೀಲ, ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಸಚಿವರಾದ ಕಳಕಪ್ಪ ಬಂಡಿ, ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ, ಬಿಜೆಪಿ ಯುವ ಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಸಂದೀಪ್ ರವಿ, ಶ್ರೇಯಸ್ ನಕಾಡೆ, ಅಮರೇಶ ರೈತನಗರ, ಭಾರ್ಗವಿ ದ್ರಾವಿಡ್, ಅಡವಿಸ್ವಾಮಿ, ರವಿ ದಂಡಿನ ಮುಂತಾದವರು ಭಾಗವಹಿಸುವರು ಎಂದು ಬಿಜೆಪಿ ಗದಗ ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷ ಸಂತೋಷ ಅಕ್ಕಿ ತಿಳಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ಪಕ್ಷದ ಪ್ರಮುಖರಾದ ಎಂ.ಎಸ್. ಕರೀಗೌಡ್ರ, ರಾಘವೇಂದ್ರ ಯಳವತ್ತಿ, ಗದಗ ನಗರ ಯುವ ಮೋರ್ಚಾ ಅಧ್ಯಕ್ಷ ನವೀನ ಕೊಟೆಕಲ್, ಪ್ರಧಾನ ಕಾರ್ಯದರ್ಶಿಗಳಾದ ಬಸವರಾಜ ನರೆಗಲ್, ವಿರೇಶಪ್ರಭು ಗದಗಿನ, ಮುಂಡರಗಿ ಯುವ ಮೋರ್ಚಾ ಅಧ್ಯಕ್ಷ ಶಿವಕುಮಾರ ಕುರಿ, ನವೀನ ಕುರ್ತಕೋಟಿ, ಶಶಿಧರಗೌಡ ಕಳ್ಳಿ, ವಿನಾಯಕ ಹೊರಕೇರಿ, ಪ್ರವೀಣ ಹಡಪದ, ರಜತ್ ಬಿಮ್ಕರ, ಸಾಗರ ಪಾಪನಾಳ, ಕಾರ್ತಿಕ ಶಿಗ್ಲಿಮಠ, ಆನಂದ ಗಡಗೇರಿ ಮುಂತಾದವರಿದ್ದರು.

## ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಜಿಲ್ಲಾಧಿಕಾರಿಗೆ ಮನವಿ



■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ತಾಲೂಕಿನ ಅರಸೀಕೆರೆ ಹೋಬಳಿಯ ಅತಿದೊಡ್ಡ ಗ್ರಾಮವಾದ ಹಾಗೂ ನಿತ್ಯವೂ ನೂರಾರು ಪ್ರಯಾಣಿಕರ ಪ್ರಯಾಣಿಸುತ್ತಿರುವ ಕಂಚಿಕೆರೆ ಬಸ್ ನಿಲ್ದಾಣಕ್ಕೆ ಸೂಕ್ತ ಮೂಲಸೌಕರ್ಯಗಳ ಕೊರತೆಯಿಂದಾಗಿ, ಪ್ರಯಾಣಿಕರು ಪರದಾಟ ನಡೆಸಬೇಕಾದ ಸ್ಥಿತಿ ನಿರ್ಮಾಣವಾಗಿದ್ದು, ಕೂಡಲೇ ಅಗತ್ಯ ಮೂಲ ಸೌಕರ್ಯಗಳನ್ನು ಕಲ್ಪಿಸುವಂತೆ ಜಿಲ್ಲಾಧಿಕಾರಿಗೆ ದಿಶಾ ಕಮಿಟಿ ಸದಸ್ಯ ರೆಡ್ಡಿ ಶಾಂತಕುಮಾರ ನೇತೃತ್ವದ ನಿಯೋಗ ಮನವಿ ಸಲ್ಲಿಸಿದೆ.

ಸೋಮವಾರ ವಿಜಯನಗರ ಜಿಲ್ಲಾಧಿಕಾರಿ ಕಚೇರಿಗೆ ತೆರಳಿದ ನಿಯೋಗ, ಜಿಲ್ಲಾಧಿಕಾರಿ ಎಂ.ಎಸ್. ದಿವಾಕರ್ ಅವರನ್ನು ಭೇಟಿಯಾಗಿ, ಮನವಿ ಸಲ್ಲಿಸಿದೆ.

ಅರಸೀಕೆರೆ ಹೋಬಳಿಯ ಅತಿದೊಡ್ಡ ಗ್ರಾಮವಾದ ಕಂಚಿಕೆರೆ ತಾಲೂಕು ಕೇಂದ್ರ ಹರಪನಹಳ್ಳಿ, ಹೋಬಳಿ ಕೇಂದ್ರ ಸ್ಥಾನ ಹಾಗೂ ದಾವಣಗೆರೆ ಜಿಲ್ಲಾ ಕೇಂದ್ರಕ್ಕೂ ಸಂಪರ್ಕ ಬೆಸೆಯುವ ಪ್ರಮುಖ ಗ್ರಾಮವಾಗಿದೆ. ಬ್ಯಾಂಕ್ ವ್ಯವಹಾರ, ವಾರದ ಸಂತೆ, ದಿನಸಿ ಖರೀದಿ ಹಾಗೂ ಆಸ್ಪತ್ರೆ ಸೇರಿದಂತೆ ವಿವಿಧ ದೈನಂದಿನ ಕೆಲಸ ಕಾರ್ಯಗಳಿಗಾಗಿ, ನಿತ್ಯವೂ ನೂರಾರು ಜನ ಸಾರ್ವಜನಿಕರು, ಗ್ರಾಮಕ್ಕೆ ಬಂದು ಹೋಗುತ್ತಾರೆ. ಜತೆಗೆ, ಗ್ರಾಮದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು ಸೇರಿದಂತೆ ಖಾಸಗಿ ಶಾಲಾ– ಕಾಲೇಜುಗಳು ಇರುವುದರಿಂದ ನೂರಾರು ವಿದ್ಯಾರ್ಥಿಗಳು ವ್ಯಾಸಂಗಕ್ಕೆ ಬರುತ್ತಿದ್ದಾರೆ. ಅರಸೀಕೆರೆ ಹೋಬಳಿಯೂ ಸೇರಿದಂತೆ ಪಕ್ಕದ ತೆಲಿಗಿ ಹೋಬಳಿಯ ಜನರು ಕಂಚಿಕೆರೆ ಗ್ರಾಮವನ್ನು ವಿವಿಧ ಕೆಲಸ– ಕಾರ್ಯಗಳಿಗಾಗಿ ಅವಲಂಭಿಸಿದ್ದಾರೆ. ಇಂಥಹ ಜನನ ನಿಬಿಡ ಅತಿದೊಡ್ಡ ಗ್ರಾಮದಲ್ಲಿರುವ ಬಸ್ ನಿಲ್ದಾಣ ಸೂಕ್ತ ಸೌಲಭ್ಯಗಳಿಲ್ಲದೆ, ತೊಂದ–ರೆ ಅನುಭವಿಸುತ್ತಿದ್ದಾರೆ. ಬಸ್ ನಿಲ್ದಾಣಕ್ಕೆ ಸೂಕ್ತ ಕಂಪೌಂಡ್ ಇಲ್ಲದ ಪರಿಣಾಮ, ಪಾಳುಬಿದ್ದಿದೆ.

ಹೀಗಾಗಿ, ಕೂಡಲೇ ಕಂಪೌಂಡ್ ನಿರ್ಮಿಸಿ, ಪ್ರಯಾಣಿಕರಿಗೆ ಸೂಕ್ತ ಸೌಕರ್ಯ ಒದಗಿಸುವಂತೆ ನಿಯೋಗದ ಸದಸ್ಯರು ಜಿಲ್ಲಾಧಿಕಾರಿಗೆ ಸಲ್ಲಿಸಿದ ಮನವಿಯಲ್ಲಿ ವಿವರಿಸಿದ್ದಾರೆ.

ಸುನೀಲ್‌ಕುಮಾರ್ ಬಿದ್ರಿ, ಜಾತಪ್ಪ, ಕರಿಬಸಯ್ಯ ಹಾಗೂ ನಾಗರಾಜ್ ಅವರು ನಿಯೋಗದಲ್ಲಿ ಹಾಜರಿದ್ದರು.

> ಗ್ರಾಮದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜ್ ಕೊಠಡಿ ಕೊರತೆಯನ್ನು ಎದುರಿಸುತ್ತಿದೆ. ಹೀಗಾಗಿ, ಅಗತ್ಯ ಕೊಠಡಿ ನಿರ್ಮಾಣ ಸೇರಿದಂತೆ ವಿವಿಧ ಮೌಲಸೌಕರ್ಯ ಕಲ್ಪಿಸಬೇಕು. ಜತೆಗೆ, ಗ್ರಾಮದ ಸಮೀಪದಲ್ಲಿರುವ ಹಳ್ಳಿಕೆರೆ ಕಂದಾಯ ಗ್ರಾಮದಲ್ಲಿ ಗ್ರಾಮ ಆಡಳಿತ ಅಧಿಕಾರಿ ಕಚೇರಿ ತೆರೆಯಬೇಕು. ಈ ಕಂದಾಯ ಗ್ರಾಮಕ್ಕೆ ಹೊಂದಿಕೊಂಡಿರುವ ಕೋಡಿತಾಂಡಾ, ವಡೇರಹಳ್ಳಿ, ಹೊನ್ನೇನಹಳ್ಳಿ, ಕೊರಚರಹಟ್ಟಿ ಹಾಗೂ ಶ್ರೀನಗರ ಕ್ಯಾಂಪ್ ಸೇರಿದಂತೆ ವಿವಿಧ ಹಳ್ಳಿಗಳಿಗೆ ಸಾರಿಗೆ ಸಂಸ್ಥೆಯ ಬಸ್ ಸೌಕರ್ಯ ಇಲ್ಲದೇ ಇಲ್ಲಿನ ಜನ ನಿತ್ಯವೂ ತೊಂದರೆ ಅನುಭವಿಸುತ್ತಿದ್ದಾರೆ. ಹೀಗಾಗಿ, ಸಂಬಂಧಿಸಿದ ಅಧಿಕಾರಿಗಳಿಗೆ ಸಾರಿಗೆ ಸಂಸ್ಥೆಯ ಬಸ್‌ಗಳನ್ನು ಕಾರ್ಯಾಚರಣೆ ಆರಂಭಿಸಲು ಸೂಕ್ತ ನಿರ್ದೇಶನ ನೀಡುವಂತೆಯೂ ನಿಯೋಗ ಮನವಿಯಲ್ಲಿ ಕೋರಿದೆ.


ಕರ್ನಾಟಕ ಸರ್ಕಾರ

**ಕಾರ್ಯನಿರ್ವಾಹಕ ಇಂಜಿನೀಯರರು, ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ ವಿಭಾಗ, ಗದಗ**

ಕಾ.ಇ: ಗ್ರಾ.ಕು.ನೀ&ನೈ.ವಿ/ಗದಗ/ ಸ.ಇಂ/ಟೆಂಡರ್/2025–26/442

ದಿನಾಂಕ : 24.06.2025

**ಟೆಂಡರ ಪ್ರಕಟಣೆ**

ಕರ್ನಾಟಕ ಲೋಕೋಪಯೋಗಿ ಮತ್ತು ಪಂಚಾಯತ ರಾಜ್ ಇಂಜಿನೀಯರಿಂಗ ಇಲಾಖೆಯಲ್ಲಿ ನೋಂದಾಯಿಸಿದ ಗುತ್ತಿಗೆದಾರರಿಂದ ಐಟಂ ದರದಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ–2000 ಮತ್ತು ಇತ್ತೀಚಿನ ತಿದ್ದುಪಡಿಗಳಂತೆ, ಕುಡಿಯುವ ನೀರು ಸರಬರಾಜು ಯೋಜನೆ ಅಡಿಯಲ್ಲಿ ಗದಗ ಜಿಲ್ಲೆಯ 1 ಕಾಮಗಾರಿಯ ಟೆಂಡರನ್ನು "ಇ ಪ್ರೊಕ್ಯುರಮೆಂಟ್" ಮುಖಾಂತರ ಟೆಂಡರ್ ಕರೆಯಲಾಗಿದೆ.

| Sl No | Indent Number | Amount put to Tender (In Lakhs) | EMD (in Rs) |
|---|---|---|---|
| 1 | RWSSD/2025-26/WS/WORK_INDENT9396 | **16.28** Lakhs | **20,350/-** |

ಸದರಿ ಕಾಮಗಾರಿಗಳ ವಿವರಗಳಿಗಾಗಿ ಹಾಗೂ ಡೌನಲೋಡ ಮಾಡಿಕೊಳ್ಳಲು ಗುತ್ತಿಗೆದಾರರು ಕರ್ನಾಟಕ ಸರಕಾರದ "ಇ ಪ್ರೋಕ್ಯೂರಮೆಂಟ್" ವೆಬ್‌ಸೈಟ್ **https://KPPP.karnataka.gov.in** ನಲ್ಲಿ ನೋಡಿಕೊಳ್ಳಬಹುದು. ಟೆಂಡರ ಸಲ್ಲಿಸಲು ಪ್ರಾರಂಭವಾಗುವ ದಿನಾಂಕ : **25.06.2025** ಪ್ರಶ್ನೋತ್ತರದ ಕೊನೆಯ ದಿನಾಂಕ : **01.07.2025** ಟೆಂಡರ ಸ್ವೀಕರಿಸುವ ಕೊನೆಯ ದಿನಾಂಕ : **03.07.2025** ತಾಂತ್ರಿಕ ಬಿಡ್ ಟೆಂಡರ ತೆರೆಯುವ ದಿನಾಂಕ : **05.07.2025** ಆರ್ಥಿಕ ಟೆಂಡರ ಬಿಡ್ ತೆರೆಯುವ ದಿನಾಂಕ : **08.07.2025**.

**ಸಹಿ/– ಕಾರ್ಯನಿರ್ವಾಹಕ ಇಂಜಿನೀಯರರು,**
**ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಗದಗ**

ವಾಸಾಸಂಇ/ಗದಗ/ಕೆಎಸ್‌ಎಂಸಿಎ/131/2025–26


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka